ಸಂಪುಟ: 11 ಸಂಚಿಕೆ: 192 ಪುಟ: 4+2 ಬೆಲೆ : 3.00 ಶುಕ್ರವಾರ, ಸೆಪ್ಟೆಂಬರ್ 04, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 11 Issue : 192 Pages : 4+2 Rate : 3.00 Friday, September 04, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಡಿ.ಕೆ. ಶಿವಕುಮಾರರಿಗೆ ಸ್ವಾಗತೆ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರನ್ನು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್. ಪಾಟೀಲ ಅವರು ಹೂಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಪ್ರಾಧಿಕಾರದ ಉಪಾಧ್ಯಕ್ಷ ರೆಹಾನ್ ರಝಾ ಐನಾಪುರ ಉಪಸ್ಥಿತರಿದ್ದರು.

### ವಾದ್ಯ ವೈಭವ, ರಥೋತ್ಸವದ ಸಂಭ್ರಮದ ನಡುವೆ ಪರಿಸರ ಜಾಗೃತಿಗೆ ವಿಶೇಷ ಒತ್ತು

# ಕಪ್ಪತ್ತಗುಡ್ಡದಲ್ಲಿ ನಂದಿಬಸವೇಶ್ವರನ ಜಾತ್ರಾ ವೈಭವ

**ವಿಜಯಸಾಕ್ಷಿ ಸುದ್ದಿ, ಡಂಬಳ**

ನೂರಾರು ವರ್ಷಗಳ ಇತಿಹಾಸ ಹೊಂದಿರುವ ಡೋಣಿ ಗ್ರಾಮದ ಕಪ್ಪತ್ತಗುಡ್ಡದ ನಂದಿವೇರಿ ಸಂಸ್ಥಾನಮಠದಲ್ಲಿ ಪ್ರತಿವರ್ಷ ಶ್ರಾವಣ ಮಾಸದಲ್ಲಿ ನಡೆಯುವ ಶ್ರೀ ನಂದಿಬಸವೇಶ್ವರ ಜಾತ್ರಾ ಮಹೋತ್ಸವವು ಭಕ್ತಿಸಾಗರದ ನಡುವೆ ವಿವಿಧ ವಾದ್ಯ ವೈಭವಗಳೊಂದಿಗೆ ಅದ್ದೂರಿಯಾಗಿ ಜರುಗಿತು.

ಕಪ್ಪತ್ತಗುಡ್ಡದ ನಂದಿವೇರಿ ಸಂಸ್ಥಾನಮಠವು ಧಾರ್ಮಿಕ ಕಾರ್ಯಕ್ರಮಗಳ ಜತೆಗೆ ಪರಿಸರ ಸಂರಕ್ಷಣೆ ಮತ್ತು ಜಾಗೃತಿಗೆ ವಿಶೇಷ ಆದ್ಯತೆ ನೀಡುತ್ತಿರುವುದು ಜಾತ್ರೆಯ ಪ್ರಮುಖ ವೈಶಿಷ್ಟ್ಯವಾಗಿದೆ. ಜಾತ್ರಾ ಮಹೋತ್ಸವಕ್ಕೆ ಆಗಮಿಸಿದ ಭಕ್ತರಿಗೆ ಸಸಿಗಳನ್ನು ವಿತರಿಸುವ ಮೂಲಕ ಪರಿಸರ ಉಳಿಸಿ ಬೆಳೆಸುವ ಸಂದೇಶವನ್ನು ಸಾರಲಾಯಿತು.

ಮಠದ ವತಿಯಿಂದ ವರ್ಷವಿಡೀ ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿ ತಿಂಗಳ ಎರಡನೇ ಭಾನುವಾರ ಪರಿಸರ ಪ್ರಿಯರಿಗೆ ಕಪ್ಪತ್ತಗುಡ್ಡದ ವಿಶೇಷತೆಗಳು ಹಾಗೂ



ಬಂಗಾರಕೊಳ್ಳದ ವೀಕ್ಷಣೆಗೆ ಅವಕಾಶ ಕಲ್ಪಿಸಿ, ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

ಪರಿಸರ ಉತ್ಸವ, ಪರಿಸರ ಸಂರಕ್ಷಣೆ, ಸಂವರ್ಧನೆ, ಸಂಶೋಧನೆ ಹಾಗೂ ಪ್ರದರ್ಶನ ಕಾರ್ಯಕ್ರಮಗಳಿಗೆ ಮಠದ ವತಿಯಿಂದ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಕಪ್ಪತ್ತಗುಡ್ಡದಲ್ಲಿರುವ ಅಪರೂಪದ ಗಿಡಮೂಲಿಕೆಗಳು ಮತ್ತು ಸಸ್ಯ ಸಂಪತ್ತಿನ ಸಂರಕ್ಷಣೆಯ ಬಗ್ಗೆಯೂ ಭಕ್ತರಲ್ಲಿ ಅರಿವು ಮೂಡಿಸಲಾಗುತ್ತಿದೆ. ಗುಡ್ಡದ ತಪ್ಪಲು ಪ್ರದೇಶಗಳಲ್ಲಿನ ಗಿಡಮೂಲಿಕೆಗಳನ್ನು ಅನಗತ್ಯವಾಗಿ ಕೀಳದಂತೆ ಜಾಗೃತಿ ಮೂಡಿಸುವ ಕಾರ್ಯವೂ ನಡೆಯುತ್ತಿದೆ.

ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಎನ್‌ಎಸ್‌ಎಸ್ ವಿದ್ಯಾರ್ಥಿಗಳ ಸಹಯೋಗದಲ್ಲಿ ಪರಿಸರ ಉತ್ಸವದ ಮಹತ್ವವನ್ನು ಆಗಮಿಸಿದ ಭಕ್ತರಿಗೆ ತಿಳಿಸಲಾಯಿತು. ಕಪ್ಪತ್ತಗುಡ್ಡದ ನಂದಿವೇರಿ ಸಂಸ್ಥಾನಮಠದ ರಥೋತ್ಸವದಲ್ಲಿ ವಿವಿಧ ಜಿಲ್ಲೆಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.

> ಪರಿಸರವನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಪರಿಸರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಿದರೆ ಉತ್ತಮ ಮಳೆ-ಬೆಳೆಯೊಂದಿಗೆ ಆರೋಗ್ಯಯುತ ಜೀವನ ಸಾಧ್ಯವಾಗಲಿದೆ.
>
> - ಪರಮಪೂಜ್ಯ ಶಿವಕುಮಾರ ಸ್ವಾಮೀಜಿ, ನಂದಿವೇರಿ ಸಂಸ್ಥಾನಮಠ

ಕಪ್ಪತ್ತಗುಡ್ಡದ ನಂದಿವೇರಿ ಸಂಸ್ಥಾನಮಠ ಹಾಗೂ ಗದಗ ಮಠ ಸ್ಥಾಪನೆಯಾಗಿ ಸುಮಾರು 300 ವರ್ಷಗಳ ಇತಿಹಾಸವಿದ್ದು, ಕಪ್ಪತ್ತಗುಡ್ಡ ಪ್ರದೇಶದಲ್ಲಿ ಮೂಢನಂಬಿಕೆಗಳ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯವೂ ನಿರಂತರವಾಗಿ ನಡೆಯುತ್ತಿದೆ.

ಪುರಾಣಗಳ ಪ್ರಕಾರ, ನಂದಿವೇರಿ ಬಸವಣ್ಣನನ್ನು ಶಿವನ ವಾಹನವೆಂದು ನಂಬಲಾಗಿದ್ದು, ಕೈಲಾಸದಿಂದ ಶಿವ-ಪಾರ್ವತಿಯರು ನಂದಿಯ ಮೂಲಕ ಈ ಕ್ಷೇತ್ರಕ್ಕೆ ಆಗಮಿಸಿ ನೆಲೆಸಿದ್ದಾರೆ ಎಂಬ ನಂಬಿಕೆ ಇದೆ. ಶಿವ, ಪಾರ್ವತಿ ಹಾಗೂ ದೇವಾನುದೇವತೆಗಳ ಪವಿತ್ರ ಸಾನ್ನಿಧ್ಯ ಹೊಂದಿರುವ ಕ್ಷೇತ್ರವೆಂದು ಕಪ್ಪತ್ತಗುಡ್ಡದ ನಂದಿವೇರಿ ಸಂಸ್ಥಾನಮಠ ಭಕ್ತರ ನಂಬಿಕೆಯ ಕೇಂದ್ರವಾಗಿದೆ.

> ವರ್ಷವಿಡೀ ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಪರಿಸರ ಉಳಿದರೆ ಮಾತ್ರ ಮಾನವನ ಬದುಕು ಉತ್ತಮವಾಗಿರಲು ಸಾಧ್ಯ ಎಂಬ ಸಂದೇಶವನ್ನು ಶಿವಕುಮಾರ ಸ್ವಾಮೀಜಿಗಳು ನೀಡುತ್ತಿರುವುದು ಅತ್ಯಂತ ಅಮೂಲ್ಯವಾದ ಕಾರ್ಯವಾಗಿದೆ.
>
> - ಬಾಲಚಂದ್ರ ಜಾಬಶೆಟ್ಟಿ, ಮಠದ ಭಕ್ತರು, ರಾಮದುರ್ಗ

ಜಾತ್ರಾ ಮಹೋತ್ಸವವು ಧಾರ್ಮಿಕ ಭಕ್ತಿ, ಸಂಪ್ರದಾಯ ಹಾಗೂ ಪರಿಸರ ಕಾಳಜಿಯ ಸಂದೇಶವನ್ನು ಒಂದೇ ವೇದಿಕೆಯಲ್ಲಿ ಸಾರುವ ಮೂಲಕ ವಿಶೇಷವಾಗಿ ಗಮನ ಸೆಳೆಯಿತು.

### ಸಚಿವ ರಾಯರೆಡ್ಡಿ ಹೇಳಿಕೆ ಖಂಡಿಸಿ ಹಿಂದೂ ಕಾರ್ಯಕರ್ತರ ವಿನೂತನ ಪ್ರತಿಭಟನೆ

# 'ಹಜ್ ಟಿಕೆಟ್‌ಗಾಗಿ' ರಸ್ತೆಯಲ್ಲೇ ಭಿಕ್ಷಾಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

"ಅಮ್ಮಾ... ಧರ್ಮ ಮಾಡಿ ತಾಯಿ... ದಯವಿಟ್ಟು ಇಲ್ಲ ಅನ್ನಬೇಡಿ... ನಿಮ್ಮ ಧರ್ಮ ನಿಮ್ಮನ್ನು, ನಿಮ್ಮ ಕುಟುಂಬವನ್ನು ಕಾಪಾಡುತ್ತದೆ... ಚಿಲ್ಲರೆ ಇಲ್ಲ ಅಂತ ಮಾತ್ರ ಹೇಳಬೇಡಿ... ದೇವರು ನಿಮಗೆ ಎಷ್ಟು ಶಕ್ತಿ ಕೊಟ್ಟಿದ್ದಾನೋ ಅಷ್ಟನ್ನಾದರೂ ಕೊಡಿ..."

ಇದು ರಸ್ತೆಯಲ್ಲಿ ಸಾಮಾನ್ಯ ಭಿಕ್ಷುಕರೊಬ್ಬರು ಕೇಳಿದ ಮಾತಲ್ಲ. ಬದಲಾಗಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರ ಹೇಳಿಕೆಯನ್ನು ಖಂಡಿಸಿ, ಶಿವರಾಮಕೃಷ್ಣ ಸೇವಾ ಟ್ರಸ್ಟ್ ಸಂಚಾಲಕ ರಾಜೂ ಖಾನಪ್ಪನವರ ನೇತೃತ್ವದಲ್ಲಿ ಹಿಂದೂ ಕಾರ್ಯಕರ್ತರು ನಡೆಸಿದ ವಿನೂತನ ಪ್ರತಿಭಟನೆಯ ದೃಶ್ಯವಿದು. ಸಚಿವರಿಗೆ ಹಜ್ ಯಾತ್ರೆಗೆ ತೆರಳುವ ಆಸೆಯಿದ್ದರೆ, ಅದಕ್ಕಾಗಿ ಜನರಿಂದ ಭಿಕ್ಷೆ ಬೇಡಿ ಹಣ ಸಂಗ್ರಹಿಸಿ ವಿಮಾನದ ಟಿಕೆಟ್ ಕೊಡಿಸುತ್ತೇವೆ ಎಂಬ ವ್ಯಂಗ್ಯದ ಮೂಲಕ ಕಾರ್ಯಕರ್ತರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಗದಗ ನಗರದ ಹುಯಿಲಗೋಳ ನಾರಾಯಣರಾವ ವರ್ತುಲದಲ್ಲಿ ಶಿವರಾಮಕೃಷ್ಣ ಸೇವಾ ಟ್ರಸ್ಟ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಹಿಂದೂ ಕಾರ್ಯಕರ್ತರು ಕೈಯಲ್ಲಿ ಪಾತ್ರೆಗಳನ್ನು ಹಿಡಿದು ಸಾರ್ವಜನಿಕರಿಂದ ಭಿಕ್ಷೆ ಸಂಗ್ರಹಿಸಿದರು.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ಇಸ್ಲಾಂ ಅತ್ಯುತ್ತಮ



ಧರ್ಮ ಎಂಬ ಅಭಿಪ್ರಾಯ ವ್ಯಕ್ತಪಡಿಸಿ, ತಮಗೂ ಹಜ್ ಯಾತ್ರೆಗೆ ತೆರಳುವ ಆಸೆಯಿದೆ ಎಂದು ಹೇಳಿದ್ದರು ಎಂದು ಪ್ರತಿಭಟನಾಕಾರರು ಆರೋಪಿಸಿದರು. ಅಲ್ಲದೆ, ಮಠ-ಮಂದಿರಗಳಿಗೆ ಹೋಗುವುದಿಲ್ಲ ಹಾಗೂ ಅಲ್ಲಿಗೆ ಹೋಗುವ ಅಗತ್ಯವಿಲ್ಲ ಎಂಬರ್ಥದಲ್ಲಿ ಸಚಿವರು ಮಾತನಾಡಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಹೇಳಿಕೆ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಜನಪ್ರತಿನಿಧಿಯಾಗಿರುವ ಸಚಿವರು ಎಲ್ಲ ಧರ್ಮಗಳ ನಂಬಿಕೆ, ಆಚರಣೆ ಹಾಗೂ ಧಾರ್ಮಿಕ ಕೇಂದ್ರಗಳನ್ನು ಸಮಾನ ಗೌರವದಿಂದ ಕಾಣಬೇಕು ಎಂದು ಆಗ್ರಹಿಸಿದರು.

**ಭಿಕ್ಷಾಟನೆಯಲ್ಲೇ ವ್ಯಂಗ್ಯದ ಪ್ರತಿಭಟನೆ!**

ಪ್ರತಿಭಟನೆಯ ಪ್ರಮುಖ ಆಕರ್ಷಣೆಯಾಗಿದ್ದು ಕಾರ್ಯಕರ್ತರ ವಿನೂತನ ಭಿಕ್ಷಾಟನೆ. ಸಾಮಾನ್ಯವಾಗಿ ಸಾಮಾಜಿಕ ಸೇವೆ ಅಥವಾ ನೆರವಿಗಾಗಿ ಭಿಕ್ಷೆ ಸಂಗ್ರಹಿಸುವ ಬದಲು, ಸಚಿವರ ಹೇಳಿಕೆಯನ್ನು ವ್ಯಂಗ್ಯಾತ್ಮಕವಾಗಿ ಖಂಡಿಸಲು ಕಾರ್ಯಕರ್ತರು ಈ ವಿಶಿಷ್ಟ ಮಾರ್ಗವನ್ನು ಅನುಸರಿಸಿದರು.

ಸಚಿವರಿಗೆ ನಿಜವಾಗಿಯೂ ಹಜ್ ಯಾತ್ರೆಗೆ ಹೋಗುವ ಆಸೆಯಿದ್ದರೆ, ನಾವು ಜನರಿಂದ ಭಿಕ್ಷೆ ಬೇಡಿ ಹಣ ಸಂಗ್ರಹಿಸುತ್ತೇವೆ. ಅದೇ ಹಣದಲ್ಲಿ ಅವರಿಗೆ ವಿಮಾನದ ಟಿಕೆಟ್ ಮಾಡಿಸಿಕೊಡುತ್ತೇವೆ ಎಂದು ಪ್ರತಿಭಟನಾಕಾರರು ಘೋಷಣೆ ಕೂಗಿದರು.

> ಮಠ-ಮಂದಿರಗಳು ಕೇವಲ ಧಾರ್ಮಿಕ ಕೇಂದ್ರಗಳಲ್ಲ. ಅವುಗಳೊಂದಿಗೆ ಜನರ ಭಾವನೆ, ಸಂಸ್ಕೃತಿ ಹಾಗೂ ಪರಂಪರೆ ಬೆಸೆದುಕೊಂಡಿವೆ. ಅವುಗಳ ಕುರಿತು ಯಾರೂ ಲಘುವಾಗಿ ಮಾತನಾಡಬಾರದು. ಸಚಿವರು ತಮ್ಮ ಹೇಳಿಕೆಯನ್ನು ಸ್ಪಷ್ಟಪಡಿಸಬೇಕು ಅಥವಾ ಹಿಂಪಡೆಯಬೇಕು. ಸಚಿವರಿಗೆ ನಿಜವಾಗಿಯೂ ಹಜ್ ಯಾತ್ರೆಗೆ ತೆರಳುವ ತವಕವಿದ್ದರೆ, ಹಿಂದೂ ಸಂಘಟನೆಗಳ ಕಾರ್ಯಕರ್ತರು ರಸ್ತೆಯಲ್ಲಿ ಭಿಕ್ಷಾಟನೆ ನಡೆಸಿ ವಿಮಾನದ ಟಿಕೆಟ್ ಖರೀದಿಸಿ ಕೊಡುತ್ತೇವೆ.
>
> - ರಾಜೂ ಖಾನಪ್ಪನವರ, ಹಿಂದೂ ಸಂಘಟನೆಗಳ ಮುಖಂಡ

ಈ ಮೂಲಕ ಧಾರ್ಮಿಕ ವಿಚಾರಗಳ ಕುರಿತು ರಾಜಕಾರಣಿಗಳು ಎಚ್ಚರಿಕೆಯಿಂದ ಹಾಗೂ ಜವಾಬ್ದಾರಿಯಿಂದ ಮಾತನಾಡಬೇಕು ಎಂಬ ಸಂದೇಶವನ್ನು ಕಾರ್ಯಕರ್ತರು ರವಾನಿಸಿದರು.

ಗದಗ-ಬೆಟಗೇರಿ ಅವಳಿ ನಗರದಲ್ಲಿ ನಡೆದ ಈ ವಿನೂತನ ಪ್ರತಿಭಟನೆ ಸಾರ್ವಜನಿಕರ ಗಮನ ಸೆಳೆಯಿತು. ಸುಮಾರು 200ಕ್ಕೂ ಹೆಚ್ಚು ಹಿಂದೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಯಲ್ಲಿ ಮಹಾಂತೇಶ ಪಾಟೀಲ, ವೆಂಕಟೇಶ ದೊಡ್ಡಮನಿ, ಹುಲುಗಪ್ಪ ವಾಲ್ಮೀಕಿ, ಶಿವಯೋಗಿ ಹಿರೇಮಠ, ಮಹಾಬಲೇಶ್ವರ ಶೆಟ್ಟರ, ಈರಪ್ಪ ಹೆಬಸೂರು, ಸುನಿಲ್ ಮುಳ್ಳಾಳ, ಕಿರಣ ಹಿರೇಮಠ, ಕುಮಾರ ಮಿಟ್ಟಿಮಠ, ಅಶೋಕ ಬಜಂತ್ರಿ, ಕುಮಾರ ನಡಗೇರಿ, ಮಂಜು ಗುಡಿಮನಿ, ಭರತ್ ಲದ್ದಿ, ಈರಣ್ಣ ವಾಲ್ಮೀಕಿ, ಅಭಿಷೇಕ ಕುರ್ತಕೋಟಿ, ಶಿವಕುಮಾರ ಲದ್ದಿ, ಬಸವರಾಜ ಬನ್ನಿಮರದ, ಕೃಷ್ಣ ಹಂಡಿ, ಶರಣಪ್ಪ ಲಕ್ಕುಂಡಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಗುಟ್ಕಾ, ತಂಬಾಕು ನಿಷೇಧ

## ಹಿಂಪಡೆಯದಂತೆ ಸಿಎಂಗೆ ಮನವಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಾರ್ವಜನಿಕ ಆರೋಗ್ಯ ಹಾಗೂ ಯುವಜನರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗುಟ್ಕಾ ಮತ್ತು ತಂಬಾಕು ನಿಷೇಧವನ್ನು ಯಾವುದೇ ಕಾರಣಕ್ಕೂ ಹಿಂಪಡೆಯಬಾರದು ಎಂದು ಆಗ್ರಹಿಸಿ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ, ಲಕ್ಷ್ಮೇಶ್ವರ ಮಹಿಳಾ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ, ವಿವಿಧ ಮಹಿಳಾ ಸಂಘಟನೆಗಳು ಹಾಗೂ ವಿದ್ಯಾರ್ಥಿನಿಯರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ತಂಬಾಕು ಉತ್ಪನ್ನಗಳ ಬಳಕೆಯಿಂದ ಯುವಜನರ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮ ಉಂಟಾಗುತ್ತಿದ್ದು, ಅನೇಕ ಕುಟುಂಬಗಳ ನೆಮ್ಮದಿ ಹಾಳಾಗುತ್ತಿದೆ. ಆದ್ದರಿಂದ ತಂಬಾಕು ಲಾಬಿ ಅಥವಾ ವ್ಯಾಪಾರಿ ಹಿತಾಸಕ್ತಿಗಳ ಒತ್ತಡಕ್ಕೆ ಮಣಿಯದೆ ನಿಷೇಧವನ್ನು ಕಟ್ಟುನಿಟ್ಟಾಗಿ ಮುಂದುವರಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಮುಂದಿನ ಪೀಳಿಗೆಯ ಆರೋಗ್ಯ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಗುಟ್ಕಾ ಮತ್ತು ತಂಬಾಕು ನಿಷೇಧವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಸಂಘಟನೆಗಳ ಪದಾಧಿಕಾರಿಗಳು ಆಗ್ರಹಿಸಿದರು. ಈ ವೇಳೆ ಬಳಗದ ಆಡಳಿತ ಮಂಡಳಿಯ ಮುಖ್ಯಸ್ಥರಾದ ಜಯಲಕ್ಷ್ಮೀ ಗಡ್ಡದೇವರಮಠ, ಜಯಲಕ್ಷ್ಮೀ ಮಹಾಂತಶೆಟ್ಟರ, ರಾಜೇಶ್ವರಿ ಪಾಟೀಲ, ರಮೇಶ ನವಲೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಪಿಓಪಿ ಮೂರ್ತಿಗಳಿಗೆ ಸಂಪೂರ್ಣ ನಿಷೇಧ; ನೈಸರ್ಗಿಕ ಬಣ್ಣದ ಮಣ್ಣಿನ ಗಣೇಶನಿಗೆ ಜಿಲ್ಲಾಡಳಿತದ ಒತ್ತು

# ಭಕ್ತಿಯಿಂದ ಗೌರಿ-ಗಣೇಶ ಆಚರಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾದ್ಯಂತ ಗೌರಿ ಹಾಗೂ ಗಣೇಶ ಚತುರ್ಥಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ, ಶಿಸ್ತುಬದ್ಧವಾಗಿ ಹಾಗೂ ಭಕ್ತಿಪೂರ್ವಕವಾಗಿ ಆಚರಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸಾರ್ವಜನಿಕರಿಗೆ ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಗೌರಿ-ಗಣೇಶ ಹಬ್ಬ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರವು ಸಮುದ್ರ, ನದಿ, ತೊರೆ, ಹಳ್ಳ, ಕೆರೆ, ಬಾವಿ ಸೇರಿದಂತೆ ವಿವಿಧ ಜಲಮೂಲಗಳು ಮಾಲಿನ್ಯಗೊಳ್ಳದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರಲೋಹ ಮಿಶ್ರಿತ ರಾಸಾಯನಿಕ ಬಣ್ಣಗಳಿಂದ ಅಲಂಕೃತಗೊಂಡ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಗಣೇಶ ಮೂರ್ತಿಗಳು ಹಾಗೂ ಇತರೆ ವಿಗ್ರಹಗಳ ಉತ್ಪಾದನೆ, ಮಾರಾಟ ಮತ್ತು ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ತಿಳಿಸಿದರು.

ಸಾರ್ವಜನಿಕರು ಮಣ್ಣಿನಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಗಣೇಶ ಮೂರ್ತಿಗಳನ್ನು ಮಾತ್ರ ಬಳಸಿ ಹಬ್ಬ ಆಚ-



ರಿಸಬೇಕು. ಮೂರ್ತಿಗಳ ವಿಸರ್ಜನೆಯನ್ನು ಸ್ಥಳೀಯ ಸಂಸ್ಥೆಗಳು ನಿಗದಿಪಡಿಸಿರುವ ಸಂಚಾರಿ ವಿಸರ್ಜನಾ ತೊಟ್ಟಿಗಳು ಅಥವಾ ಕಲ್ಯಾಣಿಗ ಳಲ್ಲಿಯೇ ಮಾಡಬೇಕು ಎಂದು ಹೇಳಿ ದರು. ಈ ಮೂಲಕ ಜಲಮೂಲಗಳ ಸಂರಕ್ಷಣೆಗೆ ಪ್ರತಿ ಯೊಬ್ಬ ಸಾರ್ವಜನಿಕರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಗಣೇಶ ಚತುರ್ಥಿಯನ್ನು ಸರಳವಾಗಿ ಹಾಗೂ ಭಕ್ತಿಪೂರ್ವಕವಾಗಿ ದೇವಸ್ಥಾನಗಳಲ್ಲಿ ಅಥವಾ ತಮ್ಮ ಮನೆಗಳಲ್ಲಿಯೇ ಆಚರಿಸುವಂತೆ ಸಲಹೆ ನೀಡಿದ ಅವರು, ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ ಸೇರಿದಂತೆ ಹಸಿ ಕಸವನ್ನು ಮೂರ್ತಿಯೊಂದಿಗೆ ನೀರಿಗೆ ಹಾಕಬಾರದು ಎಂದು ಸೂಚಿಸಿದರು.ಹಸಿ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ ಸ್ಥಳೀಯ ಸಂಸ್ಥೆಗಳ ಮೂಲಕ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು ಎಂದರು.

**ರಾತ್ರಿ 10ರ ಬಳಿಕ ಧ್ವನಿವರ್ಧಕಕ್ಕೆ ನಿರ್ಬಂಧ**

ಸರ್ಕಾರದ ಆದೇಶ ಹಾಗೂ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ರಾತ್ರಿ 10ರಿಂದ ಬೆಳಿಗ್ಗೆ 6 ಗಂಟೆಯವರೆಗೆ, ತುರ್ತು ಸಂದರ್ಭಗಳನ್ನು ಹೊರತುಪಡಿಸಿ ಧ್ವನಿವರ್ಧಕ, ಡೋಲು, ತಮ್ಮಟೆ ಸೇರಿದಂತೆ ಧ್ವನಿ ಉಂಟುಮಾಡುವ ಸಾಧನಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಸಾರ್ವಜನಿಕರು ಈ ನಿಯಮವನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಶಾಂತಿಯುತ ಹಬ್ಬ ಆಚರಣೆಗೆ ಸಹಕರಿಸಬೇಕು ಎಂದು ಹೇಳಿದರು.

**ಹಸಿರು ಪಟಾಕಿ ಬಳಸಿ, ತ್ಯಾಜ್ಯ ರಸ್ತೆಗಿಡಬೇಡಿ**

ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ಸರ್ಕಾರ ನಿಗದಿಪಡಿಸಿರುವ ಸಮಯದಲ್ಲಿ ಮಾತ್ರ ಸಿಡಿಸಬೇಕು. ರಸ್ತೆ ಹಾಗೂ ಚರಂಡಿಗಳಲ್ಲಿ ಹೂವಿನ ಹಾರ, ತಟ್ಟೆ, ಲೋಟ, ಎಲೆ ಸೇರಿದಂತೆ ಯಾವುದೇ ತ್ಯಾಜ್ಯ ವಸ್ತುಗಳನ್ನು ಎಸೆಯಬಾರದು ಎಂದು ಸೂಚಿಸಿದರು.

> ಭಕ್ತಿ ಮತ್ತು ಸಂಭ್ರಮದ ಜತೆಗೆ ಪರಿಸರ ಸಂರಕ್ಷಣೆಯೂ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಪಿಓಪಿ ಹಾಗೂ ರಾಸಾಯನಿಕ ಬಣ್ಣದ ಮೂರ್ತಿಗಳನ್ನು ಬಳಸದೆ, ಮಣ್ಣಿನ ಹಾಗೂ ನೈಸರ್ಗಿಕ ಬಣ್ಣದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪರಿಸರ ಸ್ನೇಹಿಯಾಗಿ ಗೌರಿ-ಗಣೇಶ ಹಬ್ಬ ಆಚರಿಸೋಣ.
>
> - ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ


ಈ ತ್ಯಾಜ್ಯವನ್ನು ಮನೆಗಳ ಬಳಿ ಆಗಮಿಸುವ ಸ್ಥಳೀಯ ಸಂಸ್ಥೆಗಳ ಕಸದ ವಾಹನಗಳಿಗೆ ನೀಡುವ ಮೂಲಕ ಸೂಕ್ತ ವಿಲೇವಾರಿಗೆ ಸಹಕ-ರಿಸಬೇಕು ಎಂದರು.

ಹಬ್ಬದ ಅಲಂಕಾರಕ್ಕಾಗಿ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ವಸ್ತುಗಳನ್ನು ಬಳಸದೆ, ಪರಿಸರ ಸ್ನೇಹಿ ವಸ್ತುಗಳನ್ನು ಬಳಸಬೇಕು. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಜಿಲ್ಲಾಡಳಿತದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಪರಿಸರ ಸ್ನೇಹಿ ಗೌರಿ-ಗಣೇಶ ಹಬ್ಬ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.


ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೃಷ್ಣನ ವೇಷದಲ್ಲಿ ಮಿಂಚಿದ ಪುಟಾಣಿಗಳು...


# ಕೃಷ್ಣ ಜನ್ಮಾಷ್ಟಮಿ ಸಂಭ್ರಮ!



ಶ್ರೀಕೃಷ್ಣನ ವೇಷದಲ್ಲಿ ಮಿಂಚಿದ ಗಗನ್ ನಾಗರಾಜ್ ಖಾನಪ್ಪನವರ್ ಹಾಳದಿಬ್ಬ ಓಣಿ, ಗದಗ



ಶ್ರೀಕೃಷ್ಣನ ವೇಷಭೂಷಣದಲ್ಲಿ ಕಣ್ಮನ ಸೆಳೆದ ಅದ್ವಿತ್ ಕುಮಾರ ಅಳಗವಾಡಿ ಕಾಶಿ ವಿಶ್ವನಾಥ ನಗರ, ಗದಗ



ಕೃಷ್ಣ ಜನ್ಮಾಷ್ಟಮಿ ಸಂಭ್ರಮ... ರಾಧೆಯ ವೇಷದಲ್ಲಿ ಕಣ್ಮನ ಸೆಳೆದ ಧ್ರುವಿಕಾ ಎಂ.ಎನ್.

# ಬದುಕಿನ ಅನುಭವಗಳಿಗೆ ಅಕ್ಷರರೂಪ ನೀಡಿದ ಸಾಹಿತಿ ಆಯ್ಕೆ ಕಮ್ಮಾರ

## ಸೆ. 5ರಂದು ಮುಂಡರಗಿಯಲ್ಲಿ ಜರುಗಲಿರುವ ಸಾಹಿತಿ ಆಯ್ಕೆ ಕಮ್ಮಾರ ಅವರ 'ಬದುಕು-ಬರಹ' ಕಾರ್ಯಕ್ರಮದ ನಿಮಿತ್ತ ವಿಶೇಷ ಲೇಖನ



ಸಾಹಿತ್ಯವೆಂದರೆ ಕೇವಲ ಪದಗಳ ಜೋಡಣೆಯಲ್ಲ, ಅದು ಬದುಕಿನ ಅನುಭವಗಳ ಅಭಿವ್ಯಕ್ತಿ, ಸಮಾಜದ ನೋವು–ನಲಿವುಗಳ ಪ್ರತಿಬಿಂಬ ಹಾಗೂ ಮಾನವೀಯ ಮೌಲ್ಯಗಳ ಪ್ರತಿಷ್ಠಾಪನೆ. ಇಂತಹ ಸಾರ್ಥಕ ಸಾಹಿತ್ಯದ ಮೂಲಕ ಕನ್ನಡ ಸಾರಸ್ವತ ಲೋಕಕ್ಕೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡುತ್ತಿರುವ ಸಾಹಿತಿ ಆಯ್ಕೆ ಕಮ್ಮಾರ ಅವರ ಬದುಕು–ಬರಹ ಗಮನಾರ್ಹವಾಗಿದೆ.

ಆಯ್ಕೆ ಕಮ್ಮಾರ ಅವರ ಸಾಹಿತ್ಯಯಾನವು ಬದುಕಿನ ನೆಲಮೂಲದ ಅನುಭವಗಳಿಂದ ರೂಪುಗೊಂಡಿದೆ. ಸುತ್ತಲಿನ ಸಮಾಜ, ಜನಜೀವನ, ಸಂಬಂಧಗಳ ಸೂಕ್ಷ್ಮತೆ, ಗ್ರಾಮೀಣ ಬದುಕಿನ ಸೊಗಡು, ಸಾಮಾಜಿಕ ಬದಲಾವಣೆಗಳು ಹಾಗೂ ಮಾನವೀಯ ಮೌಲ್ಯಗಳು ಅವರ ಬರಹಗಳಿಗೆ ಜೀವಂತಿಕೆಯನ್ನು ನೀಡಿವೆ. ಸಾಮಾನ್ಯರ ಬದುಕಿನ ಅಸಾಮಾನ್ಯ ಸಂಗತಿಗಳನ್ನು ಗುರುತಿಸಿ ಅವುಗಳಿಗೆ ಅಕ್ಷರರೂಪ ನೀಡುವ ಗುಣ ಅವರ ಸಾಹಿತ್ಯದ ವಿಶೇಷತೆಯಾಗಿದೆ.

ಸಾಹಿತಿಯೊಬ್ಬನಿಗೆ ಸಮಾಜದ ಬಗ್ಗೆ ಕಾಳಜಿ ಇರಬೇಕು. ಜನರ ಬದುಕಿನ ನೋವು–ನಲಿವುಗಳನ್ನು ಅರ್ಥಮಾಡಿಕೊಳ್ಳುವ ಸೂಕ್ಷ್ಮ ಮನಸ್ಸು ಇರಬೇಕು. ಈ ಗುಣಗಳು ಆಯ್ಕೆ ಕಮ್ಮಾರ ಅವರ ಬರಹಗಳಲ್ಲಿ ಸ್ಪಷ್ಟವಾಗಿ ಕಾಣಿಸಿಕೊಳ್ಳುತ್ತವೆ. ಅವರ ಬರಹಗಳು ಓದುಗರನ್ನು ಕೇವಲ ಮನರಂಜಿಸುವುದಷ್ಟೇ ಅಲ್ಲದೆ ಚಿಂತನೆಗೆ ಹಚ್ಚುತ್ತವೆ ಹಾಗೂ ಬದುಕನ್ನು ಹೊಸ ದೃಷ್ಟಿಕೋನದಿಂದ ನೋಡುವಂತೆ ಪ್ರೇರೇಪಿಸುತ್ತವೆ.

ಅವರ ಸಾಹಿತ್ಯದಲ್ಲಿ ಭಾಷೆಯ ಸರಳತೆ ಮತ್ತು ಭಾವದ ಗಾಢತೆ ವಿಶೇಷವಾಗಿ ಗಮನ ಸೆಳೆಯುತ್ತದೆ. ಅಲಂಕಾರಿಕ ಭಾಷೆಯ ಹಿಂದೆ ಓಡದೆ, ಓದುಗರ ಮನಸ್ಸಿಗೆ ನೇರವಾಗಿ ತಲುಪುವ ರೀತಿಯಲ್ಲಿ ವಿಚಾರಗಳನ್ನು ಕಟ್ಟಿಕೊಡುವುದು ಅವರ ಬರಹದ ವೈಶಿಷ್ಟ್ಯವಾಗಿದೆ. ಸ್ಥಳೀಯ ಬದುಕಿನ ಭಾಷೆ, ಜನಪದೀಯ ಸಂವೇದನೆ ಹಾಗೂ ನಿತ್ಯಜೀವನದ ಅನುಭವಗಳು ಅವರ ಸಾಹಿತ್ಯಕ್ಕೆ ಸಹಜವಾದ ಸೊಗಡನ್ನು ನೀಡಿವೆ.

**ನಾಲ್ಕು ದಶಕಗಳ ನಿಸ್ವಾರ್ಥ ಶಿಕ್ಷಣ ಸೇವೆ**

ಆಯ್ಕೆ ಕಮ್ಮಾರ ಅವರ ಬದುಕು ಅವರ ಬರಹದಷ್ಟೇ ಪ್ರೇರಣಾದಾಯಕವಾಗಿದೆ. ಸಾಹಿತ್ಯದ ಮೇಲಿನ ಆಸಕ್ತಿ, ನಿರಂತರ ಓದು, ಸಮಾಜದ ಬಗ್ಗೆ ಇರುವ ಕಾಳಜಿ ಹಾಗೂ ಬರವಣಿಗೆಯ ಮೇಲಿನ ಶ್ರದ್ಧೆ ಅವರನ್ನು ಒಬ್ಬ ಸೃಜನಶೀಲ ಸಾಹಿತಿಯಾಗಿ ರೂಪಿಸಿವೆ. ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೆ ಪ್ರತಿಭೆಯ ಜೊತೆಗೆ ಪರಿಶ್ರಮ, ತಾಳ್ಮೆ ಮತ್ತು ನಿರಂತರ ಅಧ್ಯಯನ ಅಗತ್ಯ.

ಈ ಗುಣಗಳೇ ಅವರ ಸಾಹಿತ್ಯಿಕ ವ್ಯಕ್ತಿತ್ವವನ್ನು ಮತ್ತಷ್ಟು ಗಟ್ಟಿಗೊಳಿಸಿವೆ.

ಸಾಹಿತ್ಯದ ಜೊತೆಗೆ ಅವರು ಶಿಕ್ಷಣ ಕ್ಷೇತ್ರದಲ್ಲಿಯೂ ವಿಶಿಷ್ಟ ಸೇವೆ ಸಲ್ಲಿಸಿದ್ದಾರೆ. ಗೃಹಪಾಠ ಶಿಕ್ಷಕರಾಗಿ 40 ವರ್ಷಗಳ ಕಾಲ ಬಡ ಮಕ್ಕಳಿಗೆ ಉಚಿತವಾಗಿ ವಿಜ್ಞಾನ, ಗಣಿತ ಹಾಗೂ ಇಂಗ್ಲಿಷ್ ವಿಷಯಗಳನ್ನು ಬೋಧಿಸಿರುವುದು ಅವರ ಬದುಕಿನ ಮಹತ್ವದ ಸಾಧನೆಗಳಲ್ಲಿ ಒಂದಾಗಿದೆ.

**ಸೌಹಾರ್ದದ ಸಂದೇಶ ಸಾರಿದ ಬಹುಮುಖ ಪ್ರತಿಭೆ**

ಭಾವೈಕ್ಯತೆಯನ್ನೇ ಪ್ರೀತಿಸುವ ಆಯ್ಕೆ ಕಮ್ಮಾರ ಅವರು ಮಣಕವಾಡದ ಮಹಿಮಾ ಪುರುಷ ಶ್ರೀ ಗುರುಮೃತ್ಯುಂಜಯ ಅವರ ಹೆಸರಿನಲ್ಲಿ 'ಸೌಹಾರ್ದ ಮಹಾಮನೆ ವೇದಿಕೆ'ಯನ್ನು ಸ್ಥಾಪಿಸಿದ್ದಾರೆ. ಈ ಮೂಲಕ ನಿರಂತರವಾಗಿ ಆಧ್ಯಾತ್ಮಿಕ ಚಿಂತನ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದಾರೆ.

ಅನೇಕ ನಾಟಕಗಳನ್ನು ರಚಿಸಿರುವ ಅವರು ನಟ ಹಾಗೂ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಮಣಕವಾಡದ ಶ್ರೀ ಗುರುಮೃತ್ಯುಂಜಯ ಮಹಾಸ್ವಾಮಿಗಳನ್ನು ತಮ್ಮ ಆರಾಧ್ಯ ದೈವವಾಗಿಸಿಕೊಂಡಿರುವ ಅವರು, ಅವರ ಕುರಿತು 'ಮಣಕವಾಡದ ಮಾಣಿಕ್ಯ', 'ಮಣಕವಾಡದ ಸಿರಿ' ಹಾಗೂ 'ಮೃತ್ಯುಂಜಯ ಮಹಾತ್ಮೆ' ಎಂಬ ನಾಟಕಗಳನ್ನು ರಚಿಸಿದ್ದಾರೆ. ಅಲ್ಲದೆ, ಮಣಕವಾಡದ ಮೃತ್ಯುಂಜಯ ಅಜ್ಜನ ಕುರಿತು ಭಾಮಿನಿ ಷಟ್ಪದಿ ಪುರಾಣ ರಚಿಸುವ ಸಿದ್ಧತೆಯಲ್ಲಿದ್ದಾರೆ.

ಪುಟ್ಟರಾಜ ಗುರುವರ್ಯರ ಕುರಿತು 'ಭೂಲೋಕದ ಭಗವಂತ', 'ಮರೆಯಾದ ಧ್ರುವತಾರೆ' ಹಾಗೂ 'ಕೃತಪುರ ರತ್ನ' ಕೃತಿಗಳನ್ನು ರಚಿಸಿದ್ದಾರೆ. ಚಿಕ್ಕೇನಕೊಪ್ಪದ ಚನ್ನವೀರಶರಣರ ಕುರಿತು 'ಪರಂಜ್ಯೋತಿ', ಸಿದ್ಧಗಂಗಾಶ್ರೀಗಳ ಕುರಿತು 'ಮೇರುಪರ್ವತ' ಸೇರಿದಂತೆ 27ಕ್ಕೂ ಹೆಚ್ಚು ಗ್ರಂಥಗಳನ್ನು ರಚಿಸಿರುವ ಹೆಗ್ಗಳಿಕೆ ಅವರದ್ದಾಗಿದೆ.

**ಪ್ರಶಸ್ತಿಗಳ ಬೆನ್ನತ್ತಿದ ಸಾಹಿತ್ಯ ಸಾಧನೆ**

ಸಾಹಿತ್ಯ, ಶಿಕ್ಷಣ, ರಂಗಭೂಮಿ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಅವರಿಗೆ ಸಂತಕವಿ, ಸಾಮರಸ ಕವಿ, ಸದ್ಭಾವನಾ ಪ್ರಶಸ್ತಿ, ಬಂಗಾರಚುಕ್ಕಿ ಪ್ರಶಸ್ತಿ ಹಾಗೂ ಭಾವೈಕ್ಯ ಪ್ರಶಸ್ತಿ ಸೇರಿದಂತೆ ಹತ್ತು ಹಲವು ಪ್ರಶಸ್ತಿಗಳು ಸಂದಿವೆ.

ಸಾಹಿತ್ಯವು ಸಮಾಜಕ್ಕೆ ಕನ್ನಡಿ ಮಾತ್ರವಲ್ಲ, ದಾರಿದೀಪವೂ ಹೌದು. ಸಮಾಜದಲ್ಲಿನ ಅಸಮಾನತೆ, ಅಜ್ಞಾನ, ಮೌಢ್ಯ ಹಾಗೂ ಅನ್ಯಾಯಗಳ ಕುರಿತು ಚಿಂತಿಸುವಂತೆ ಮಾಡುವ ಶಕ್ತಿ ಸಾಹಿತ್ಯಕ್ಕಿದೆ.

ಮಾನವೀಯತೆ, ಸಹಬಾಳ್ವೆ, ಪ್ರೀತಿ, ಸಹಾನುಭೂತಿ ಹಾಗೂ ಸಾಮಾಜಿಕ ಹೊಣೆಗಾರಿಕೆಯಂತಹ ಮೌಲ್ಯಗಳನ್ನು ಬೆಳೆಸುವಲ್ಲಿ ಸಾಹಿತಿಯ ಪಾತ್ರ ಮಹತ್ವದ್ದಾಗಿದೆ. ಆಯ್ಕೆ ಕಮ್ಮಾರ ಅವರ ಬರಹಗಳು ಈ ಸಾಮಾಜಿಕ ಜವಾಬ್ದಾರಿಯ ನೆಲೆಯಲ್ಲಿಯೇ ಅರ್ಥಪೂರ್ಣವಾಗುತ್ತವೆ.

ವೇಗದ ತಂತ್ರಜ್ಞಾನ ಯುಗದಲ್ಲಿಯೂ ಹೊಸ ತಲೆಮಾರಿನ ಓದುಗರನ್ನು ಸಾಹಿತ್ಯದತ್ತ ಸೆಳೆಯುವುದು ಇಂದಿನ ಸಾಹಿತಿಗಳ ಮುಂದಿರುವ ದೊಡ್ಡ ಸವಾಲಾಗಿದೆ. ಓದುವ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಅಗತ್ಯವಿದ್ದು, ಬದುಕಿನ ವಾಸ್ತವತೆಗಳನ್ನು ಸರಳವಾಗಿ ಹಾಗೂ ಪರಿಣಾಮಕಾರಿಯಾಗಿ ಕಟ್ಟಿಕೊಡುವ ಬರಹಗಳು ಈ ಕಾರ್ಯಕ್ಕೆ ನೆರವಾಗುತ್ತವೆ. ಈ ದೃಷ್ಟಿಯಿಂದ ಆಯ್ಕೆ ಕಮ್ಮಾರ ಅವರ ಸಾಹಿತ್ಯಿಕ ಪ್ರಯತ್ನಗಳು ವಿಶೇಷ ಮಹತ್ವ ಪಡೆದುಕೊಳ್ಳುತ್ತವೆ.

ಒಟ್ಟಿನಲ್ಲಿ, ಆಯ್ಕೆ ಕಮ್ಮಾರ ಅವರ ಬದುಕು ಮತ್ತು ಬರಹಗಳು ಸಾಹಿತ್ಯವೆಂಬುದು ಬದುಕಿನಿಂದ ಹುಟ್ಟಿ ಮತ್ತೆ ಬದುಕನ್ನೇ ಶ್ರೀಮಂತಗೊಳಿಸುವ ಪ್ರಕ್ರಿಯೆ ಎಂಬುದನ್ನು ಸಾರುತ್ತವೆ. ಅವರ ಸಾಹಿತ್ಯಸೇವೆ ಇನ್ನಷ್ಟು ವಿಸ್ತಾರವಾಗಲಿ, ಹೊಸ ಕೃತಿಗಳು ಕನ್ನಡ ಸಾಹಿತ್ಯ ಲೋಕಕ್ಕೆ ದೊರೆಯಲಿ ಹಾಗೂ ಅವರ ಬರಹಗಳು ಮುಂದಿನ ಪೀಳಿಗೆಗೂ ಮೌಲ್ಯಯುತ ಸಂದೇಶ ನೀಡಲಿ ಎಂಬುದು ಸಾಹಿತ್ಯಾಸಕ್ತರ ಆಶಯವಾಗಿದೆ.

ಸೆಪ್ಟೆಂಬರ್ 5ರಂದು ಮುಂಡರಗಿಯ ಜಗದ್ಗುರು ಅನ್ನದಾನೀಶ್ವರ ಕನ್ನಡ ಸಾಹಿತ್ಯ ಭವನದಲ್ಲಿ ಆಯ್ಕೆ ಕಮ್ಮಾರ ಅವರ ಕುರಿತು ಆಯೋಜಿಸಿರುವ 'ಬದುಕು–ಬರಹ' ಕಾರ್ಯಕ್ರಮ ಅತ್ಯಂತ ಸ್ತುತ್ಯಾರ್ಹವಾಗಿದೆ. ಸಾಹಿತ್ಯದ ಪಯಣದಲ್ಲಿ ಅವರು ಇನ್ನಷ್ಟು ಎತ್ತರದ ಸಾಧನೆಗಳನ್ನು ಮಾಡಲಿ, ಕನ್ನಡ ನಾಡು–ನುಡಿಯ ಸೇವೆಯಲ್ಲಿ ಅವರ ಲೇಖನಿ ನಿರಂತರವಾಗಿ ಸಾಗಲಿ ಎಂದು ಹಾರೈಸೋಣ.

- **ಪ್ರೊ. ಶ್ರೀಶೈಲ ಬಡಿಗೇರ**

---

# ಇಂದು ಕೃಷ್ಣ ಜನ್ಮಾಷ್ಟಮಿ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಯಾದವ ಸಮಾಜ, ಕೃಷ್ಣ ಯುವಕ ಮಂಡಳ ಹಾಗೂ ನಾಗನಾಥ ಭಜನಾ ಮಂಡಳದ ಆಶ್ರಯದಲ್ಲಿ 38ನೇ ವರ್ಷದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 4 ಮತ್ತು 5ರಂದು ವಿಜೃಂಭಣೆಯಿಂದ ಆಚರಿಸಲಾಗುವುದು. ಸೆ. 4ರಂದು ಮಧ್ಯರಾತ್ರಿ 12 ಗಂಟೆಗೆ ಶ್ರೀಕೃಷ್ಣನ ತೊಟ್ಟಿಲೋತ್ಸವ ಹಾಗೂ ನಾಮಕರಣ ಕಾರ್ಯಕ್ರಮವು ವಿಧಿವಿಧಾನಗಳೊಂದಿಗೆ ಜರುಗಲಿದೆ. ಸೆ. 5ರಂದು ಮುಂಜಾನೆ ಶ್ರೀಕೃಷ್ಣನ ಭಾವಚಿತ್ರದ ಮೆರವಣಿಗೆಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಸಲಾಗುವುದು. ಬಳಿಕ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಇದಕ್ಕೂ ಮುನ್ನ ಶ್ರೀಕೃಷ್ಣ ದೇವಸ್ಥಾನದಲ್ಲಿ ಮೂರ್ತಿಗೆ ಅಭಿಷೇಕ ಹಾಗೂ ವಿವಿಧ ಪೂಜಾ ವಿಧಿವಿಧಾನಗಳು ನೆರವೇರಲಿವೆ.

ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಸಂಜೆ ರಾಧಾ–ಕೃಷ್ಣ ವೇಷಭೂಷಣ ಸ್ಪರ್ಧೆ ಹಾಗೂ ಕೋಲಾಟ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

---

# ಸ್ಲಂ ಜನರ ಭರವಸೆ ಈಡೇರಿಸಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**



2023ರ ವಿಧಾನಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಸ್ಲಂ ನಿವಾಸಿಗಳಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿ ಸ್ಲಂ ಜನಾಂದೋಲನ–ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಸ್ಲಂ ಪ್ರದೇಶಗಳಿಗೆ 'ಶ್ರಮಿಕ ನಿವಾಸ ಪ್ರದೇಶ' ಎಂದು ನಾಮಕರಣ ಮಾಡಿ, ವಸತಿ ಯೋಜನೆ ಹಾಗೂ ಹಕ್ಕುಪತ್ರ ವಿತರಣೆ ಮಾಡುವ ಭರವಸೆಯನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು. ರಾಜ್ಯದ ವಸತಿರಹಿತ ಕುಟುಂಬಗಳ ಸಮೀಕ್ಷೆ ನಡೆಸಿ 'ನಗರ ಲ್ಯಾಂಡ್ ಬ್ಯಾಂಕ್' ಯೋಜನೆ ಜಾರಿಗೊಳಿಸುವುದರೊಂದಿಗೆ ಪ್ರತಿಯೊಂದು ಬಡ ಕುಟುಂಬಕ್ಕೂ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಬಡವರು ಸ್ವತಃ ಮನೆ ನಿರ್ಮಿಸಿಕೊಳ್ಳಲು ರಾಜ್ಯ ಸರ್ಕಾರದಿಂದ ರೂ. 3.5 ಲಕ್ಷ ಹಾಗೂ ಕೇಂದ್ರ ಸರ್ಕಾರದಿಂದ ರೂ. 1.5 ಲಕ್ಷ ಸಬ್ಸಿಡಿ ನೀಡಬೇಕು. ಜಿಲ್ಲಾ ಕೇಂದ್ರಗಳಲ್ಲಿ ನಿವೇಶನ ಹಂಚಿಕೆ ಮಾಡುವಾಗ ಘೋಷಿತ ಹಾಗೂ ಅಘೋಷಿತ ಕೊಳಚೆ ಪ್ರದೇಶದ ಕುಟುಂಬಗಳಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ, ಮೌಲಾಸಾಬ ಎಸ್. ಗಚ್ಚಿ, ಶರಣಪ್ಪ ಸೂಡಿ, ಪರವೀನ್‌ಬಾನು ಹವಾಲ್ದಾರ, ಪುಷ್ಪಾ ಬಿಜಾಪೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಶಾಲಾ-ಕಾಲೇಜುಗಳನ್ನು ತಂಬಾಕು ಮುಕ್ತಗೊಳಿಸಲು ಜಿಲ್ಲಾಧಿಕಾರಿ ಸೂಚನೆ

# ತಂಬಾಕು ನಿಯಂತ್ರಣಕ್ಕೆ ಜಿಲ್ಲೆಯಲ್ಲಿ ಮತ್ತಷ್ಟು ಕಠಿಣ ಕ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಾದ್ಯಂತ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ–2003ರ ಪರಿಣಾಮಕಾರಿ ಅನುಷ್ಠಾನಕ್ಕೆ ಮತ್ತಷ್ಟು ಕಠಿಣ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ತಂಬಾಕು ನಿಯಂತ್ರಣ ಹಾಗೂ ಜಾಗೃತಿ ಕಾರ್ಯಕ್ರಮಗಳ ಕುರಿತು ಚರ್ಚಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸಭೆಗೆ ಸ್ವಾಗತಿಸಿದರು. ಜಿಲ್ಲಾ ಕಾರ್ಯಕ್ರಮಾಧಿಕಾರಿ ಹಾಗೂ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ್ ಅವರು ಜಿಲ್ಲೆಯಲ್ಲಿನ ತಂಬಾಕು ನಿಯಂತ್ರಣ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಎಪ್ರಿಲ್ 2026ರಿಂದ ಇಲ್ಲಿಯವರೆಗೆ ಜಿಲ್ಲೆಯ 61 ಶಾಲಾ–ಕಾಲೇಜುಗಳಲ್ಲಿ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಹಾಗೂ ಕೋಟ್ಪಾ ಕಾಯ್ದೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

> **ತಂಬಾಕು ವ್ಯಸನದಿಂದ ವ್ಯಕ್ತಿಯ ಆರೋಗ್ಯದ ಜತೆಗೆ ಕುಟುಂಬ ಮತ್ತು ಸಮಾಜದ ಮೇಲೂ ದುಷ್ಪರಿಣಾಮ ಉಂಟಾಗುತ್ತದೆ. ಎಲ್ಲ ಇಲಾಖೆಗಳು ಹಾಗೂ ಸಂಘ–ಸಂಸ್ಥೆಗಳು ಕೈಜೋಡಿಸಿ ಗದಗ ಜಿಲ್ಲೆಯನ್ನು ತಂಬಾಕು ಮುಕ್ತ ಹಾಗೂ ಆರೋಗ್ಯಯುತ ಜಿಲ್ಲೆಯನ್ನಾಗಿ ರೂಪಿಸಬೇಕು.**
>
> **- ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ**

ಪೊಲೀಸ್ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ 25 ದಾಳಿ ನಡೆಸಿ, 180 ಪ್ರಕರಣ ದಾಖಲಿಸಿ, ರೂ. 84,950 ದಂಡ ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ 1,440 ತಂಬಾಕು ವ್ಯಸನಿಗಳಿಗೆ ಆಪ್ತ ಸಮಾಲೋಚನೆ ನಡೆಸಲಾಗಿದೆ.

ಸಮುದಾಯ ಮಟ್ಟದಲ್ಲಿಯೂ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸಭೆಯಲ್ಲಿ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ತಂಬಾಕು ಮಾರಾಟ ಹಾಗೂ ಬಳಕೆಯನ್ನು ಕಟ್ಟುನಿಟ್ಟಾಗಿ ತಡೆಯುವುದು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವುದು, ಕಾನೂನುಬಾಹಿರ ತಂಬಾಕು ಜಾಹೀರಾತುಗಳಿಗೆ ಕಡಿವಾಣ ಹಾಕುವುದು ಹಾಗೂ ಎಲ್ಲ ಶಿಕ್ಷಣ ಸಂಸ್ಥೆಗಳನ್ನು ತಂಬಾಕು ಮುಕ್ತವಾಗಿಸಲು ಕ್ರಮ ಕೈಗೊಳ್ಳುವ ಕುರಿತು ಚರ್ಚಿಸಲಾಯಿತು.

ತಂಬಾಕು ಮಾರಾಟಗಾರರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳಿಂದ ಪರವಾನಗಿ ಪಡೆಯಬೇಕು.

ಅಂಗಡಿಕಾರರು ಹಾಗೂ ಸಾರ್ವಜನಿಕ ಸ್ಥಳಗಳ ಮಾಲೀಕರು ತಂಬಾಕು ನಿಷೇಧ ಮತ್ತು 21 ವರ್ಷದೊಳಗಿನವರಿಗೆ ತಂಬಾಕು ಮಾರಾಟ ನಿಷೇಧ ಕುರಿತ ನಾಮಫಲಕಗಳನ್ನು ಕಡ್ಡಾಯ ವಾಗಿ ಪ್ರದರ್ಶಿಸಬೇಕು ಎಂದು ಸೂಚಿಸಲಾಯಿತು. ಬಾಯಿ ಕ್ಯಾನ್ಸರ್ ತಪಾಸಣಾ ಶಿಬಿರ ಹಾಗೂ ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಜಾಥಾ ಹಮ್ಮಿಕೊಳ್ಳುವಂತೆಯೂ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಶಿಕ್ಷಣ ಇಲಾಖೆ ಅಧಿಕಾರಿಗಳು, ನಗರಸಭೆ ಸಿಬ್ಬಂದಿ, ಹೋಟೆಲ್ ಮಾಲೀಕರ ಸಂಘದ ಪ್ರತಿನಿಧಿಗಳು ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಿಬ್ಬಂದಿ ಉಪಸ್ಥಿತರಿದ್ದರು.

---

## ಗದಗ 1ನೇ ಶಾಖೆಯಲ್ಲಿ ವಿವಿಧ ವಿಮಾ ಯೋಜನೆಗಳ ಕುರಿತು ಮಾಹಿತಿ

# ಎಲ್‌ಐಸಿ 70ನೇ ವರ್ಷಾಚರಣೆ: ವಿಮಾ ಸಪ್ತಾಹ

**ವಿಜಯಸಾಕ್ಷಿ ಸುದ್ದಿ, ಗದಗ**



ಭಾರತೀಯ ಜೀವ ವಿಮಾ ನಿಗಮದ (ಎಲ್‌ಐಸಿ) 70ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ನಗರದ ಭಾರತೀಯ ಜೀವ ವಿಮಾ ನಿಗಮದ ಗದಗ 1ನೇ ಶಾಖೆಯಲ್ಲಿ ವಿಮಾ ಸಪ್ತಾಹ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಶಾಖೆಯ ವ್ಯವಸ್ಥಾಪಕ ಪ್ರಶಾಂತ ಮುದಿಹಾಳ ಅವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತೀಯ ಜೀವ ವಿಮಾ ನಿಗಮವು 1956ರ ಸೆಪ್ಟೆಂಬರ್ 1ರಂದು ಕೇವಲ 5 ಕೋಟಿ ರೂ. ಬಂಡವಾಳದೊಂದಿಗೆ ಆರಂಭವಾಗಿ, ಇಂದು 34 ಲಕ್ಷ ಕೋಟಿ ರೂ.ಗೂ ಅಧಿಕ ಆಸ್ತಿ ಹೊಂದಿರುವ ವಿಶ್ವದ ಅತಿದೊಡ್ಡ ವಿಮಾ ಸಂಸ್ಥೆಯಾಗಿ ಬೆಳೆದಿದೆ ಎಂದು ತಿಳಿಸಿದರು.

ಗ್ರಾಮೀಣ ಜನರಿಗೆ ವಿಮಾ ಭದ್ರತೆ ಒದಗಿಸುವುದು ಹಾಗೂ ಜನರ ಉಳಿತಾಯದ ಹಣವನ್ನು ದೇಶದ ಅಭಿವೃದ್ಧಿಗೆ ಬಳಸುವುದು ಎಲ್‌ಐಸಿಯ ಪ್ರಮುಖ ಉದ್ದೇಶವಾಗಿದೆ ಎಂದರು.

ಉಪ ಶಾಖಾಧಿಕಾರಿ ವಿಕ್ರಂ ಶೀಲವಂತ ಮಾತನಾಡಿ, ಎಲ್‌ಐಸಿಯ ಹಣಕಾಸು ವ್ಯವಹಾರಗಳ ಕುರಿತು ಮಾಹಿತಿ ನೀಡಿದರು. ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ, ಸುರಕ್ಷಾ ವಿಮಾ ಯೋಜನೆ, ಮಕ್ಕಳ ಉನ್ನತ ಶಿಕ್ಷಣ ಹಾಗೂ ನಿವೃತ್ತಿ ಯೋಜನೆಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಶಾಖೆಯ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ವಿಮಾ ಪ್ರತಿನಿಧಿಗಳು ಉಪಸ್ಥಿತರಿದ್ದರು. ಹಿರಿಯ ವಿಮಾ ಪ್ರತಿನಿಧಿಗಳಾದ ಡಿ.ಸಿ. ಜವಳಿ, ಯಲ್ಲಪ್ಪ ಎಚ್. ಬಾಬರಿ, ಜಗದೀಶ ಗೌಡರ, ರಮೇಶ ಕಲಾಲ, ರಾಜು ಕಾರಡಗಿ, ಎಲ್.ಐ. ಪಿದ್ದನಗೌಡರ, ರಾಜೇಶ್ವರಿ ಕಲಾಲ, ಶಿವಾನಂದ ಬಳಿಗಾರ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

---

## ಶಿರಹಟ್ಟಿ-ಲಕ್ಷ್ಮೇಶ್ವರ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರಿಗೆ ಮಾರ್ಗದರ್ಶನ

# ಪ್ಯಾಕ್ಸ್‌ಗಳ ಬಲವರ್ಧನೆಗೆ ವಿಶೇಷ ತರಬೇತಿ ಶಿಬಿರ

**ವಿಜಯಸಾಕ್ಷಿ ಸುದ್ದಿ, ಗದಗ**




ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಕೆಸಿಸಿ ಬ್ಯಾಂಕ್ ಧಾರವಾಡದ ಸಂಯುಕ್ತ ಆಶ್ರಯದಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಹಾಗೂ ಮುಖ್ಯ ಕಾರ್ಯನಿರ್ವಾಹಕರಿಗಾಗಿ ವಿಶೇಷ ತರಬೇತಿ ಶಿಬಿರ ನಡೆಯಿತು.

ಪಟ್ಟಣದ ನಾಟಕ ಕಲಾಬ್ರಹ್ಮ ಶ್ರೀ ಎಚ್. ವೆಂಕುಬರಾವ ಕಲಾಭವನದಲ್ಲಿ ನಡೆದ ಕಾರ್ಯಕ್ರಮವನ್ನು ಕೆಸಿಸಿ ಬ್ಯಾಂಕ್ ನಿರ್ದೇಶಕ ಗೋವಿಂದಗೌಡ ವಿ. ಪಾಟೀಲ ಉದ್ಘಾಟಿಸಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಬಲವರ್ಧನೆಗೊಳಿಸಿ ಬಹುಸೇವಾ ಕೇಂದ್ರಗಳನ್ನಾಗಿ ಪರಿವರ್ತಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ವಿಶೇಷ ಯೋಜನೆಗಳನ್ನು ಜಾರಿಗೊಳಿಸಿದೆ. ಸಹಕಾರ ಸಂಘಗಳಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಹಣ ದುರುಪಯೋಗ ಪ್ರಕರಣಗಳಿಗೆ ಕಡಿವಾಣ ಹಾಕುವಲ್ಲಿ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿ ನಿರ್ದೇಶಕರ ಜವಾಬ್ದಾರಿ ಮಹತ್ವದ್ದಾಗಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆಸಿಸಿ ಬ್ಯಾಂಕ್ ನಿರ್ದೇಶಕ ಮಾಳಪ್ಪ ಗು. ನಿಂಗಜ್ಜನವರ ಅವರು, ಸಹಕಾರ ಸಂಘಗಳು ರೈತರ ಆರ್ಥಿಕ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಮಾದರಿ ಸಂಘಗಳ ಕಾರ್ಯವೈಖರಿಯಿಂದ ಇತರ ಸಂಸ್ಥೆಗಳು ಪ್ರೇರಣೆ ಪಡೆಯಬೇಕು ಎಂದು ತಿಳಿಸಿದರು.

ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಸಹಾಯಕ ನಿರ್ದೇಶಕಿ ಎಚ್.ಎ. ಬಂಡೆಣ್ಣವರ ಮಾತನಾಡಿ, ಪ್ಯಾಕ್ಸ್‌ಗಳು ಆರ್ಥಿಕವಾಗಿ ಸಬಲಗೊಂಡು ಲಾಭದಾಯಕವಾಗಿ ಕಾರ್ಯನಿರ್ವಹಿಸಿದರೆ ಸಹಕಾರ ಚಳುವಳಿಗೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ ಎಂದರು.

ತರಬೇತಿ ಕಾರ್ಯಾಗಾರದಲ್ಲಿ ಆಡಳಿತ ಮಂಡಳಿ ನಿರ್ದೇಶಕರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಕರ್ತವ್ಯ ಮತ್ತು ಜವಾಬ್ದಾರಿಗಳು, ಸಹಕಾರಿ ಕಾಯ್ದೆಯ ಇತ್ತೀಚಿನ ತಿದ್ದುಪಡಿಗಳು, ಬಹುಸೇವಾ ಕೇಂದ್ರಗಳಾಗಿ ಪ್ಯಾಕ್ಸ್‌ಗಳ ಪರಿವರ್ತನೆ ಹಾಗೂ ಸಹಕಾರ ಸಂಘಗಳ ಪ್ರಗತಿ ಕುರಿತು ಶಂಕರ ಎಸ್. ಕರಬಸಣ್ಣವರ, ವಿಶ್ವನಾಥ ಎಚ್. ಲಮಾಣಿ ಹಾಗೂ ಜಗದೀಶಗೌಡ ಎಂ. ಪಾಟೀಲ ಉಪನ್ಯಾಸ ನೀಡಿದರು.

ಶಿರಹಟ್ಟಿ ತಾಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಕೆ.ಸಿ. ಕೂಸನೂರಮಠ, ಕೆಸಿಸಿ ಬ್ಯಾಂಕ್‌ನ ವಿಶ್ವನಾಥ ಎಚ್. ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ರಶೀದಾಬಾನು ಸಿ. ಯಲಿಗಾರ ವಂದಿಸಿದರು.

---

# ಪ್ರಕಲ್ಪ ಶಾಲೆಯಲ್ಲಿ ಗುಂಪು ಮಟ್ಟದ ಕ್ರೀಡಾಕೂಟದ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಆನಂದ ಆಶ್ರಮ ರಸ್ತೆಯ ಈಶ್ವರ ಬಡಾವಣೆಯಲ್ಲಿರುವ ಪ್ರಕಲ್ಪ ಹೈಯರ್ ಪ್ರೈಮರಿ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ 2026–27ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಗುಂಪು ಮಟ್ಟದ ಕ್ರೀಡಾಕೂಟವನ್ನು ಉತ್ಸಾಹ ಹಾಗೂ ಸಂಭ್ರಮದಿಂದ ಆಯೋಜಿಸಲಾಯಿತು.

ಶಾಲೆಯ ಸಂಸ್ಥಾಪಕ ಹಾಗೂ ಅಧ್ಯಕ್ಷ ಎಸ್.ವಿ. ಹುಬ್ಬಳ್ಳಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಕ್ರೀಡೆಗಳು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಅತ್ಯಗತ್ಯವಾಗಿದ್ದು, ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಜವಾಬ್ದಾರಿ, ತಂಡದ ಮನೋಭಾವ ಹಾಗೂ ಗೆಲುವು–ಸೋಲನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ಬೆಳೆಸುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಕಾರ್ಯದರ್ಶಿ ಪಿ.ಎಸ್. ಹುಬ್ಬಳ್ಳಿ, ಮಾರ್ಗದರ್ಶಕಿ ಶ್ರೀಮತಿ ಎಸ್.ಎಸ್. ಹುಬ್ಬಳ್ಳಿ, ಮುಖ್ಯೋಪಾಧ್ಯಾಯಿನಿ ಶ್ರೀಮತಿ ಮುಕ್ತಾ ಭಜಂತ್ರಿ, ದೈಹಿಕ ಶಿಕ್ಷಣ ಶಿಕ್ಷಕಿ ಶ್ರೀಮತಿ ಪ್ರವೀಣಾ ಹಾಗೂ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತಮ್ಮ ಪ್ರತಿಭೆ ಪ್ರದರ್ಶಿಸಿದರು. ಲೆಮನ್ ಅಂಡ್ ಸ್ಪೂನ್ ರೇಸ್, ಗೋಣಿಚೀಲ ಜಿಗಿತ, 100 ಮೀಟರ್ ಮತ್ತು 200 ಮೀಟರ್ ಓಟ, ಕಬಡ್ಡಿ, ಖೋ–ಖೋ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆದವು. ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆಯಿಂದ ಶಾಲಾ ಮೈದಾನದಲ್ಲಿ ಕ್ರೀಡೋತ್ಸವದ ಸಂಭ್ರಮ ಮನೆ ಮಾಡಿತ್ತು.

ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ದೈಹಿಕ ಶಿಕ್ಷಣ ಶಿಕ್ಷಕರು, ಸಹ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರ ಸಹಕಾರದೊಂದಿಗೆ ಕ್ರೀಡಾಕೂಟ ಯಶಸ್ವಿಯಾಗಿ ನೆರವೇರಿತು.

ಸಂಕ್ಷಿಪ್ತ ಸುದ್ದಿಗಳು

## ಸೆ. 6ರಂದು 'ಜನನಿ ರತ್ನ' ರಾಜ್ಯ ಪ್ರಶಸ್ತಿ ಪ್ರದಾನ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಜನನಿ ಕಲಾ ಮತ್ತು ಸಾಂಸ್ಕೃತಿಕ ಸಂಘ (ರಿ.) ಹಾಗೂ ಜನನಿ ಸೇವಾ ಟ್ರಸ್ಟ್ (ರಿ.), ಹಂಪಾಪಟ್ಟಣ ವತಿಯಿಂದ 2026ನೇ ಸಾಲಿನ 'ಜನನಿ ರತ್ನ' ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸೆ. 6ರಂದು ಸಂಜೆ 6.30ಕ್ಕೆ ಹಂಪಾಪಟ್ಟಣದ ಜೈ ಹನುಮ ಬಯಲು ರಂಗಮಂದಿರದಲ್ಲಿರುವ ದಾನ ಚಿಂತಾಮಣಿ ಸುಬ್ಬರೆಡ್ಡಿ ವೇದಿಕೆಯಲ್ಲಿ ಆಯೋಜಿಸಲಾಗಿದೆ.

ತೆಗ್ಗಿನಮಠ ಮಹಾಸಂಸ್ಥಾನ, ಹರಪನಹಳ್ಳಿಯ ಪೂಜ್ಯ ಶ್ರೀ ಷ.ಬ್ರ. ವರಸದ್ಯೋಜಾತ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದೆ. ವಿಜಯನಗರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕುರಿ ಶಿವಮೂರ್ತಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ರಾಜ್ಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಡಾ. ಪರಮೇಶ್ವರಯ್ಯ ಸೊಪ್ಪಿಮಠ ಆಶಯ ನುಡಿಗಳನ್ನಾಡುವರು. ಜನನಿ ಸೇವಾ ಟ್ರಸ್ಟ್ ಅಧ್ಯಕ್ಷ ಎ. ಕೇಶವಮೂರ್ತಿ ಅಧ್ಯಕ್ಷತೆ ವಹಿಸುವರು.

ವಿಶೇಷ ಆಹ್ವಾನಿತರಾಗಿ ತಹಶೀಲ್ದಾರ್ ಶ್ರೀಮತಿ ಆರ್. ಕವಿತಾ ಹಾಗೂ ಪೊಲೀಸ್ ವೃತ್ತ ನಿರೀಕ್ಷಕ ವಿಕಾಸ್ ಲಮಾಣಿ ಭಾಗವಹಿಸುವರು. ವಿವಿಧ ಕ್ಷೇತ್ರಗಳ ಜನಪ್ರತಿನಿಧಿಗಳು, ಸಂಘಟನೆಗಳ ಮುಖಂಡರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಹತ್ತು ಸಾಧಕರಿಗೆ 'ಜನನಿ ರತ್ನ' ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಹರಪನಹಳ್ಳಿಯ ಟಿ.ಎಂ. ಚಂದ್ರಶೇಖರಯ್ಯ ಅವರಿಗೆ ಜನನಿ ಶಿಕ್ಷಣ ರತ್ನ, ಯಳಂದೂರಿನ ಪಿ. ಮಂಜುನಾಥ ಅವರಿಗೆ ಜನನಿ ಜಾನಪದ ರತ್ನ, ಕಂಪ್ಲಿಯ ಡಾ. ಎಂ.ಎಸ್. ಸಾವಿತ್ರಮ್ಮ ಅವರಿಗೆ ಜನನಿ ಸಾಹಿತ್ಯ ರತ್ನ ಹಾಗೂ ಹೊಸಪೇಟೆಯ ಪರಮಣ್ಣ ದೊರೆ ಅವರಿಗೆ ಜನನಿ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಹಗರಿಬೊಮ್ಮನಹಳ್ಳಿಯ ಡಾ. ಜ. ಚಿದಾನಂದ ಅವರಿಗೆ ಜನನಿ ಪಶುವೈದ್ಯ ರತ್ನ, ಬಳ್ಳಾರಿಯ ವಿ. ರಾಮಾಂಜನೇಯ ಅವರಿಗೆ ಜನನಿ ಸಮಾಜ ಸೇವಕ ರತ್ನ, ದೇವದುರ್ಗದ ರೂಪ ಶ್ರೀನಿವಾಸ ನಾಯಕ ಅವರಿಗೆ ಜನನಿ ಹೋರಾಟ ರತ್ನ ಹಾಗೂ ಹಂಪಾಪಟ್ಟಣದ ಕೆ. ಸೋಮನಾಥ ಅವರಿಗೆ ಜನನಿ ರಕ್ತದಾನಿ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಅಲ್ಲದೆ, ಹಂಪಾಪಟ್ಟಣದ ಗಾಳೇಮ್ಮನವರ ದುರುಗಮ್ಮ ಅವರಿಗೆ ಜನನಿ ಕೃಷಿ ರತ್ನ ಹಾಗೂ ಸಂಡೂರಿನ ಎಸ್. ಮಂಜುಳ ಅವರಿಗೆ ಜನನಿ ಸಾರಿಗೆ ರತ್ನ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ನಿಗಮದ ನಿರ್ದೇಶಕ ಎಸ್. ರಾಜೇಂದ್ರ ಪ್ರಸಾದ್, ಗ್ರಾ.ಯೋ.ಪಾ. ಹಗರಿಬೊಮ್ಮನಹಳ್ಳಿ ತಾಲೂಕು ಅಧ್ಯಕ್ಷ ಸೊನ್ನದ ಗುರುಬಸವರಾಜ, ಹಿಂದುಳಿದ ಜಾತಿಗಳ ಒಕ್ಕೂಟದ ವಿಜಯನಗರ ಜಿಲ್ಲಾಧ್ಯಕ್ಷ ಬುಡ್ಡಿ ಬಸವರಾಜ್, ಕೊಟ್ಟೂರು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ವೆಂಕಟೇಶನಾಯ್ಕ, ಕ.ನಿ.ಪ. ಧ್ವನಿ ಅಧ್ಯಕ್ಷ ಜ. ಸೋಮನಾಥ, ಅಮ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಸಾಹಿರಾ ಬಾನು, ಜಿಲ್ಲಾ ಕ.ನಿ.ಪ. ಸಂಘದ ಸದಸ್ಯ ಸಿ. ಶಿವಾನಂದ, ನಿವೃತ್ತ ಸೈನಿಕ ಹಾಗೂ ಶಿಕ್ಷಕ ಪಿ. ಆಂಜನೇಯ, ಹಂಪಾಪಟ್ಟಣ ಗ್ರಾ.ಪಂ. ಅಧ್ಯಕ್ಷೆ ಪತ್ರಿ ಗೀತಾ ಯಲ್ಲಪ್ಪ, ಮುಖಂಡ ಎಲಿಗಾರ ಕುಬೇರಪ್ಪ ಹಾಗೂ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಹೆಚ್. ಭೀಮಪ್ಪ ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ.

## ನಿಧನ

### ಸಯ್ಯದ್ ಆಸೀಫ್ ಕೊಪ್ಪಳ

**ಗದಗ:** ಮರಹೊಮ್ ಸಯ್ಯದ್ ಇಬ್ರಾಹಿಂ ಸಾಬ್ ಬಡೇಸಾಬ್ ಕೊಪ್ಪಳ, ನಿವೃತ್ತ ಕೋರ್ಟ್ ಸಿರಸ್ತೇದಾರರವರ ಸುಪುತ್ರರಾದ ಸಯ್ಯದ್ ಆಸೀಫ್ ಕೊಪ್ಪಳ ಅವರು ಸೆಪ್ಟೆಂಬರ್ 3ರಂದು ಸಂಜೆ ನಿಧನರಾಗಿದ್ದಾರೆ. ಅವರ ಅಂತಿಮ ಯಾತ್ರೆ ಸೆಪ್ಟೆಂಬರ್ 4ರಂದು ಅವರ ನಿವಾಸ ಜಾಕೀರ್ ಹುಸೇನ್ ಕಾಲೋನಿ, ಕ್ಲರ್ಕ್ ಇನ್ ಹೋಟೆಲ್ ಹಿಂಭಾಗದಿಂದ ಹೊರಡಲಿದೆ. ಜನಾಜಾ ನಮಾಜ್ ಫಿರ್ದೌಸ್ ಮಸೀದಿಯಲ್ಲಿ ನೆರವೇರಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಮೃತರು ಕುಟುಂಬಸ್ಥರು, ಬಂಧು-ಬಳಗ ಹಾಗೂ ಅಪಾರ ಸ್ನೇಹಿತರನ್ನು ಅಗಲಿದ್ದಾರೆ.



## ಇಂದು ಶ್ರೀಕೃಷ್ಣ ಜಯಂತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಭಗವಾನ್ ಶ್ರೀಕೃಷ್ಣ ಜಯಂತಿ-2026 ಕಾರ್ಯಕ್ರಮವನ್ನು ಸೆಪ್ಟೆಂಬರ್ 4ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಹಾಗೂ ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಸೇರಿದಂತೆ ವಿವಿಧ ಶಾಸಕರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಭಾಗವಹಿಸುವರು.

ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ಲಮಾಣಿ ಉಪನ್ಯಾಸ ನೀಡುವರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ವ್ಹಿ. ಬಳ್ಳಾರಿ ಅವರು ಸಾರ್ವಜನಿಕರನ್ನು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೋರಿದ್ದಾರೆ.

### ಕೆಂಪು ಬಣ್ಣದ ಕೊಳಕು ನೀರಿನಲ್ಲಿ ಕೀಟಗಳ ಪತ್ತೆ ಆರೋಪ; ಪಂ ವಿರುದ್ಧ ಸಾರ್ವಜನಿಕರ ಆಕ್ರೋಶ

# ಅಯ್ಯೋ... ಇದೇನಾ ಕುಡಿಯುವ ನೀರು!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣ ಪಂಚಾಯಿತಿಯಿಂದ ನರೇಗಲ್ಲ ಪಟ್ಟಣ ಸೇರಿದಂತೆ ಕೋಡಿಕೊಪ್ಪ, ಕೋಚಲಾಪೂರ, ತೋಟಗಂಟಿ, ದ್ಯಾಂಪೂರ ಹಾಗೂ ಮಲ್ಲಾಪೂರ ಗ್ರಾಮಗಳಿಗೆ ಪ್ರತಿನಿತ್ಯ ಸರಬರಾಜು ಮಾಡಲಾಗುತ್ತಿರುವ ಕುಡಿಯುವ ನೀರು ಕಲುಷಿತಗೊಂಡಿದ್ದು, ಕೆಂಪು ಬಣ್ಣದ ಕೊಳಕು ನೀರಿನಲ್ಲಿ ಸಣ್ಣ ಸಣ್ಣ ಕೀಟಗಳು ಕಾಣಸಿಗುತ್ತಿವೆ ಎಂಬ ಆರೋಪ ಕೇಳಿಬಂದಿದೆ.

ಕಳೆದ ಒಂದು ವಾರದಿಂದ ಕುಡಿಯಲು ಯೋಗ್ಯವಲ್ಲದ ನೀರು ಸರಬರಾಜು ಮಾಡಲಾಗುತ್ತಿದ್ದು, ಸಾರ್ವಜನಿಕರು ಪಟ್ಟಣ ಪಂಚಾಯಿತಿ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೊಳಕು ನೀರಿನಿಂದ ಮನೆಗಳಲ್ಲಿರುವ ನೀರು ಶುದ್ಧೀಕರಣ ಫಿಲ್ಟರ್‌ಗಳೇ ಹಾಳಾಗುತ್ತಿವೆ. ಫಿಲ್ಟರ್‌ಗಳನ್ನೇ ಹಾಳು ಮಾಡುವಷ್ಟು ಕಲುಷಿತ ನೀರು ಸರಬರಾಜಾಗುತ್ತಿದ್ದರೆ, ಯಾವುದೇ ಫಿಲ್ಟರ್ ವ್ಯವಸ್ಥೆ ಇಲ್ಲದೆ ಇದೇ ನೀರನ್ನು ಕುಡಿಯುವ ಜನಸಾಮಾನ್ಯರ ಪರಿಸ್ಥಿತಿ ಏನು ಎಂದು ನಾಗರಿಕರು ಪ್ರಶ್ನಿಸಿದ್ದಾರೆ.



ನೀರಿನಲ್ಲಿ ಬಾಲಹುಳು ಸೇರಿದಂತೆ ಸಣ್ಣ ಸಣ್ಣ ಕೀಟಗಳು ಕಾಣಸಿಗುತ್ತಿದ್ದು, ಜೀವಭಯದಲ್ಲೇ ನೀರು ಕುಡಿಯುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ನೀರಿನ ಗುಣಮಟ್ಟವನ್ನು ತಕ್ಷಣವೇ ಪರಿಶೀಲಿಸಿ, ಕಲುಷಿತ ನೀರು ಸರಬರಾಜಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

> ಕಳೆದ ಒಂದು ವಾರದಿಂದ ಪಟ್ಟಣ ಪಂಚಾಯಿತಿಯಿಂದ ಸರಬರಾಜಾಗುತ್ತಿರುವ ನೀರು ಕುಡಿಯಲು ಯೋಗ್ಯವಾಗಿಲ್ಲ. ನೀರಿನಲ್ಲಿ ಬಾಲಹುಳು ಸೇರಿದಂತೆ ಸಣ್ಣ ಸಣ್ಣ ಕೀಟಗಳು ಕಾಣಸಿಗುತ್ತಿವೆ. ಜೀವಭಯದಲ್ಲೇ ನೀರು ಕುಡಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ನೀರಿನ ಗುಣಮಟ್ಟವನ್ನು ತಕ್ಷಣ ಪರಿಶೀಲಿಸಿ, ಕಲುಷಿತ ನೀರು ಸರಬರಾಜಾಗದಂತೆ ಕ್ರಮ ಕೈಗೊಳ್ಳಬೇಕು.
>
> - ಅನೀತಾ ವೈದ್ಯಮಠ, ನಿವಾಸಿ, ನರೇಗಲ್ಲ

ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಜಿಗಳೂರು ಸಮೀಪ ನಿರ್ಮಿಸಿರುವ ನೀರು ಶುದ್ಧೀಕರಣ ಘಟಕ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ಎಂಬ ಅನುಮಾನವೂ ಸಾರ್ವಜನಿಕರಲ್ಲಿ ಮೂಡಿದೆ. ಕಲುಷಿತ ನೀರು ಸರಬರಾಜಾಗುತ್ತಿರುವುದಕ್ಕೆ ಹೊಣೆ ಯಾರು ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪಟ್ಟಣದ ಜನರಿಗೆ ಕನಿಷ್ಠ ಮೂಲಸೌಕರ್ಯವನ್ನೇ ಸಮರ್ಪಕವಾಗಿ ಒದಗಿಸಲು ಸಾಧ್ಯವಾಗದಿದ್ದರೆ, ಇನ್ನುಳಿದ ಅಭಿವೃದ್ಧಿ ಕಾರ್ಯಗಳನ್ನು ಯಾವ ರೀತಿ ಕೈಗೊಳ್ಳುತ್ತಾರೆ ಎಂದು ನಾಗರಿಕರು ಪ್ರಶ್ನಿಸಿದ್ದಾರೆ.

ಪಟ್ಟಣದಲ್ಲಿ 247 ಕುಡಿಯುವ ನೀರು ಸರಬರಾಜು ಯೋಜನೆ ನನೆಗುದಿಗೆ ಬಿದ್ದು ವರ್ಷಗಳೇ ಕಳೆದಿವೆ. ನೀರು ಸರಬರಾಜು ಯೋಜನೆಗಾಗಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಹಲವು ರಸ್ತೆಗಳನ್ನು ಅಗೆದು ಹಾಕಲಾಗಿದ್ದು, ರಸ್ತೆಗಳು ಗುಂಡಿಮಯವಾಗಿವೆ ಎಂಬ ಆರೋಪವೂ ಕೇಳಿಬಂದಿದೆ.

ಕುಡಿಯುವ ನೀರಿನ ಸಮಸ್ಯೆ ಹಾಗೂ ರಸ್ತೆ ಗುಂಡಿಗಳ ಸಮಸ್ಯೆಯನ್ನು ಕೂಡಲೇ ಬಗೆಹರಿಸದಿದ್ದರೆ, ಪಟ್ಟಣ ಪಂಚಾಯಿತಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದು ಸಾರ್ವಜನಿಕರು ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ನರೇಗಲ್ಲ ಪಟ್ಟಣ ಪಂಚಾಯಿತಿಯ ನೀರು ಸರಬರಾಜು ಸಿಬ್ಬಂದಿ ಶಂಕ್ರಪ್ಪ ದೊಡ್ಡಣ್ಣವರ, ಜಿಗಳೂರು ಕೆರೆಯಲ್ಲಿ ನೀರಿನ ಅಭಾವ ಎದುರಾಗಿದ್ದು, ಕೆರೆಯ ತಳಮಟ್ಟದ ನೀರನ್ನು ಸರಬರಾಜು ಮಾಡುತ್ತಿರುವುದರಿಂದ ನೀರು ಕಲುಷಿತಗೊಂಡಿದೆ. ಕೆರೆಗೆ ಸಮರ್ಪಕವಾಗಿ ನೀರು ಬಂದ ತಕ್ಷಣ ಸಮಸ್ಯೆ ಬಗೆಹರಿಯಲಿದೆ ಎಂದು ತಿಳಿಸಿದ್ದಾರೆ.

## ಹೊಸ ರೂಪದಲ್ಲಿ ಮಿನುಗಿದ ಐತಿಹಾಸಿಕ ರೋಟರಿ ಸರ್ಕಲ್




**ವಿಜಯಸಾಕ್ಷಿ ಸುದ್ದಿ, ಗದಗ**


ನಗರದ ಮಧ್ಯಭಾಗದಲ್ಲಿರುವ ಐತಿಹಾಸಿಕ ರೋಟರಿ ಸರ್ಕಲ್‌ಗೆ ರೋಟರಿ ಕ್ಲಬ್ ಗದಗ-ಬೆಟಗೇರಿಯ ಸದಸ್ಯರು ನವೀಕರಣ ಕಾರ್ಯ ಕೈಗೊಂಡು ಹೊಸ ರೂಪ ನೀಡಿದ್ದಾರೆ.

ನವೀಕರಣ ಕಾರ್ಯಕ್ರಮದ ಸಂದರ್ಭದಲ್ಲಿ ಮಾತನಾಡಿದ ರೋಟರಿ ಕ್ಲಬ್‌ನ ಮಾಜಿ ಅಧ್ಯಕ್ಷರಾದ ರೊ. ಡಾ. ರಾಜಶೇಖರ ಎಸ್. ಬಳ್ಳಾರಿ, 1970ರ ದಶಕದಲ್ಲಿ ರೋಟರಿ ಸಂಸ್ಥೆ ಗದಗ-ಬೆಟಗೇರಿಯು ಕೈಗೊಂಡಿದ್ದ ಸಾಮಾಜಿಕ ಸೇವಾ ಕಾರ್ಯಗಳನ್ನು ಗುರುತಿಸಿ ನಗರದ ಮಧ್ಯಭಾಗದಲ್ಲಿರುವ ಈ ವೃತ್ತಕ್ಕೆ 'ರೋಟರಿ ಸಂಸ್ಥೆ ಗದಗ-ಬೆಟಗೇರಿ ಸರ್ಕಲ್' ಎಂದು ನಾಮಕರಣ ಮಾಡಲಾಗಿತ್ತು ಎಂದು ತಿಳಿಸಿದರು.

ಕಾಲಾನಂತರ ಈ ವೃತ್ತವು 'ರೋಟರಿ ಸರ್ಕಲ್' ಎಂದೇ ಜನಪ್ರಿಯತೆ ಪಡೆದುಕೊಂಡಿತು. ಈ ಸರ್ಕಲ್ ನಿರ್ಮಾಣಕ್ಕೆ ಸಂಸ್ಥೆಯ ಮಾಜಿ ಅಧ್ಯಕ್ಷರಾದ ದಿವಂಗತ ವಿ.ಆರ್. ಮಾಳೆಕೊಪ್ಪಮಠ ಅವರು ಪ್ರಮುಖ ಕೊಡುಗೆ ನೀಡಿದ್ದರು ಎಂದು ಹಳೆಯ ನೆನಪುಗಳನ್ನು ಮೆಲುಕು ಹಾಕಿದರು..

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷರಾದ ರೊ. ಡಾ. ಪ್ರದೀಪ ಉಗಲಾಟ, ಕಾರ್ಯದರ್ಶಿ ರೊ. ಅಕ್ಷಯ ಶೆಟ್ಟಿ, ಸದಸ್ಯರಾದ ರೊ. ಬಾಲಕೃಷ್ಣ ಕಾಮತ್, ರೊ. ಚನ್ನವೀರಪ್ಪ ಹುಣಶಿಕಟ್ಟಿ, ರೊ. ಚಂದ್ರಮೌಳಿ ಜಾಲಿ, ರೊ. ಎಚ್.ಎಸ್. ಪಾಟೀಲ, ರೊ. ಶ್ರೀಧರ ಧರ್ಮಾಯತ, ರೊ. ವಿಶ್ವನಾಥ ಯಳಮಲಿ, ರೊ. ಸುರೇಶ ಕುಂಬಾರ, ರೊ. ಶ್ರೀಧರ ಸುಲ್ತಾನಪುರ, ರೊ. ಡಾ. ಧನೇಶ ದೇಸಾಯಿ, ರೊ. ಡಾ. ಪ್ರಕಾಶ ಡಿ. ಕೊಲೋಳಗಿ, ರೊ. ಡಾ. ಉಮೇಶ ಪುರದ, ರೊ. ಎನ್.ಡಿ. ಜೈನ್, ರೊ. ಎಸ್.ಎಸ್. ಹೊಸಳ್ಳಿಮಠ, ರೊ. ಮಹಾಂತೇಶ ಬಾತಾಖಾನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 'ಕೌಸ್ತುಭ' ಫಸ್ಟ್ ಲುಕ್ ರಿಲೀಸ್



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಟ ಪ್ರಮೋದ್ ಶೆಟ್ಟಿ ಅವರ ಜನ್ಮದಿನದ ಅಂಗವಾಗಿ ಬಹುನಿರೀಕ್ಷಿತ 'ಕೌಸ್ತುಭ' ಚಿತ್ರದ ಫಸ್ಟ್ ಲುಕ್ ಬಿಡುಗಡೆ ಮಾಡಲಾಗಿದೆ. ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಅವರು ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ಅವರ ಹೊಸ ಲುಕ್ ಸಿನಿಪ್ರಿಯರ ಗಮನ ಸೆಳೆಯುತ್ತಿದೆ.

ಈಗಾಗಲೇ ಹಲವು ಪೋಷಕ, ಖಳ ಹಾಗೂ ಪ್ರಧಾನ ಪಾತ್ರಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಪ್ರಮೋದ್ ಶೆಟ್ಟಿ ಅವರು 'ಕೌಸ್ತುಭ' ಚಿತ್ರದ ಮೂಲಕ ಕನ್ನಡ ಚಿತ್ರರಂಗದ ಜನಪ್ರಿಯ ನಾಯಕ ನಟರ ಸಾಲಿಗೆ ಸೇರುವ ಭರವಸೆ ಇದೆ ಎಂದು ಚಿತ್ರದ ನಿರ್ದೇಶಕ ಸಿದ್ದು ವಜ್ರಪ್ಪ ಅಭಿಪ್ರಾಯಪಟ್ಟಿದ್ದಾರೆ.

'ಕೌಸ್ತುಭ' ಒಂದು ಪತ್ತೇದಾರಿ ಕಥಾಹಂದರ ಹೊಂದಿರುವ ಚಿತ್ರವಾಗಿದ್ದು, ಕಥೆಯ ಹಲವು ಪ್ರಮುಖ ಅಂಶಗಳನ್ನು ಈಗಲೇ ಬಹಿರಂಗಪಡಿಸುವುದು ಸಾಧ್ಯವಿಲ್ಲ ಎಂದು ಚಿತ್ರತಂಡ ತಿಳಿಸಿದೆ. ಆದರೆ, ಚಿತ್ರದಲ್ಲಿನ ಪೊಲೀಸ್ ಪಾತ್ರ ಹಾಗೂ ಕ್ಲೈಮ್ಯಾಕ್ಸ್ ವಿಭಿನ್ನವಾಗಿರಲಿದೆ ಎಂದು ನಾಯಕ ನಟ ಪ್ರಮೋದ್ ಶೆಟ್ಟಿ ಹೇಳಿದ್ದಾರೆ.

ಇದುವರೆಗೆ ತಮ್ಮ ಹಲವು ಪಾತ್ರಗಳಲ್ಲಿ ಹಾಸ್ಯದ ಛಾಯೆಯನ್ನೂ ಪ್ರದರ್ಶಿಸಿದ್ದ ಪ್ರಮೋದ್ ಶೆಟ್ಟಿ, ಈ ಚಿತ್ರದಲ್ಲಿ 'ಚಾಣಕ್ಯ' ಎಂಬ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರದಲ್ಲಿ ನಾಲ್ಕು ಸಾಹಸ ದೃಶ್ಯಗಳಿದ್ದು, ಇದು ಪ್ರಮೋದ್ ಶೆಟ್ಟಿ ನಾಯಕ ನಟರಾಗಿ ಅಭಿನಯಿಸುತ್ತಿರುವ ಮೊದಲ ಕಮರ್ಷಿಯಲ್ ಚಿತ್ರವಾಗಿದೆ.

ಚಿತ್ರದಲ್ಲಿ ಹಿರಿಯ ನಟ ಹಾಗೂ ನಿರ್ದೇಶಕ ಟಿ.ಎಸ್. ನಾಗಾಭರಣ, ರವಿಶಂಕರ್ ಗೌಡ, ಕಿರುತೆರೆ ನಟಿ ವಿದ್ಯಾ, ಕಡ್ಡಿಪುಡಿ ಚಂದ್ರು ಸೇರಿದಂತೆ ದೊಡ್ಡ ತಾರಾಗಣವೇ ಇದೆ. 'ರಾಮಾ ರಾಮಾ ರೇ' ಖ್ಯಾತಿಯ ನಟರಾಜ್ ವಿಶೇಷ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಚಿತ್ರಕ್ಕೆ ಅರವಿಂದ್ ರಾಜ್ ಸಂಕಲನ, ದಿಲೀಪ್ ಎಂ. ರಾಜ್ ಸಾಹಸ ನಿರ್ದೇಶನವಿದೆ. ಎವಿಕೆ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ರಾಜೇಶ್ ಧನಪಾಲ್ ಬಂಡವಾಳ ಹೂಡಿದ್ದಾರೆ. ಚಿತ್ರದ ಪ್ರಚಾರ ಕಾರ್ಯವನ್ನು ಪಿಆರ್‌ಓ ರಮಿತ್ ಏಲಕ್ಕಿ, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ನಿರ್ವಹಿಸುತ್ತಿದ್ದಾರೆ.

### ಅರ್ಹ ರೋಗಿಗಳಿಗೆ ಉಚಿತವಾಗಿ ಕಣ್ಣಿನ ಮಸೂರ ಅಳವಡಿಕೆ

## ರೋಟರಿ ಕಣ್ಣಿನ ಆಸ್ಪತ್ರೆಯಲ್ಲಿ ಐವರಿಗೆ ನೇತ್ರ ಶಸ್ತ್ರಚಿಕಿತ್ಸೆ

**ವಿಜಯಸಾಕ್ಷಿ ಸುದ್ದಿ, ಗದಗ**




ರೋಟರಿ ಕ್ಲಬ್ ಗದಗ-ಬೆಟಗೇರಿ, ಇನ್ನರ್ ವ್ಹೀಲ್ ಕ್ಲಬ್ ಆಫ್ ಗದಗ ಮಿಡ್‌ಟೌನ್ ಹಾಗೂ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಸಹಯೋಗದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದ ಸಮೀಪದ ರೋಟರಿ ಕಣ್ಣಿನ ಆಸ್ಪತ್ರೆಯಲ್ಲಿ ನೇತ್ರ ತಪಾಸಣೆ ಹಾಗೂ ಕಣ್ಣಿನ ಮಸೂರ ಅಳವಡಿಸುವ ಶಸ್ತ್ರಚಿಕಿತ್ಸಾ ಶಿಬಿರ ಆಯೋಜಿಸಲಾಗಿತ್ತು.

ಶಿಬಿರದಲ್ಲಿ ತಪಾಸಣೆಗೊಳಗಾದ ಸುಮಾರು 25 ಮಂದಿಯಲ್ಲಿ ಶಸ್ತ್ರಚಿಕಿತ್ಸೆಗೆ ಅರ್ಹರಾದ ಐವರಿಗೆ ನೇತ್ರ ಶಸ್ತ್ರಚಿಕಿತ್ಸೆ ನಡೆಸಲಾಯಿತು.

ಇದು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ವತಿಯಿಂದ ಆಯೋಜಿಸಲಾಗಿದ್ದ 209ನೇ ನೇತ್ರ ಶಸ್ತ್ರಚಿಕಿತ್ಸಾ ಕಾರ್ಯಕ್ರಮವಾಗಿತ್ತು.

ದಿ. ಡಾ. ಹೇಮಂತ ಕೂಡ್ಲೆಪ್ಪ ಪರಡ್ಡಿ ಅವರ ಸ್ಮರಣಾರ್ಥ ಡಾ. ಕೂಡ್ಲೆಪ್ಪ ಹಾಗೂ ಶ್ರೀಮತಿ ಪಾರ್ವತಿ ಕೂಡ್ಲೆಪ್ಪ ಪರಡ್ಡಿ ಅವರು ಶಿಬಿರಕ್ಕೆ ಪ್ರಾಯೋಜಕತ್ವ ನೀಡಿದ್ದರು. ಅಲ್ಲದೆ, ಶ್ರೀಮತಿ ಗೀತಾ ಭಿಕ್ಷಾವತಿಮಠ ಹಾಗೂ ದಿ. ನಾಗಪ್ಪ ಮತ್ತು ದಿ. ನೀಲಮ್ಮ ಬ್ಯಾಲಹುಣಸಿ ಅವರ ಸ್ಮರಣಾರ್ಥ ಶ್ರೀಮತಿ ಇಂದುಮತಿ ಬ್ಯಾಲಹುಣಸಿ ಅವರು ಶಿಬಿರಕ್ಕೆ ಸಹಕಾರ ನೀಡಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷರಾದ ಶ್ರೀಧರ ಸುಲ್ತಾನಪುರ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ವಿವಿಧ ಜನಪರ ಹಾಗೂ ಸಮಾಜಮುಖಿ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಐಎಲ್ ಚೇರ್ಮನ್ ರೊ. ಡಾ. ಶೇಖರ ಡಿ. ಸಜ್ಜನ ಮಾತನಾಡಿ, ನೇತ್ರ ಶಸ್ತ್ರಚಿಕಿತ್ಸೆಗೆ ಒಳಗಾದ ಪ್ರತಿಯೊಬ್ಬ ರೋಗಿಯೂ ವೈದ್ಯರು ನೀಡುವ ಸಲಹೆ ಹಾಗೂ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಶಸ್ತ್ರಚಿಕಿತ್ಸೆಯನ್ನು ಡಾ. ಜ್ಯೋತಿ ಪಾಟೀಲ ನೆರವೇರಿಸಿದರು. ಶಸ್ತ್ರಚಿಕಿತ್ಸೆಗೆ ಒಳಗಾದ ರೋಗಿಗಳಿಗೆ ದೃಷ್ಟಿ ಹಾಗೂ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಅಗತ್ಯ ಸಲಹೆ ಮತ್ತು ಸೂಚನೆಗಳನ್ನು ನೀಡಿದರು. ನೇತ್ರ ಸಹಾಯಕರಾದ ರುದ್ರೇಶ ಅವರು ಶಸ್ತ್ರಚಿಕಿತ್ಸೆಯ ನಂತರ ಕಣ್ಣಿನ ಆರೋಗ್ಯದ ಬಗ್ಗೆ ವಹಿಸಬೇಕಾದ ಮುನ್ನೆಚ್ಚರಿಕೆ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷರಾದ ರೊ. ಡಾ. ರಾಜೇಂದ್ರ ಗಚ್ಚಿನಮಠ, ರೊ. ಶ್ರೀಧರ ಧರ್ಮಾಯತ, ರೊ. ಎಚ್.ಎಸ್. ಪಾಟೀಲ ಉಪಸ್ಥಿತರಿದ್ದರು. ರೋಟರಿ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷರಾದ ಡಾ. ಪ್ರದೀಪ ಉಗಲಾಟ ಸ್ವಾಗತಿಸಿದರು. ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಕಾರ್ಯದರ್ಶಿಗಳಾದ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು. ರೋಟರಿ ಸಂಸ್ಥೆಯ ಕಾರ್ಯದರ್ಶಿಗಳಾದ ರೊ. ಅಕ್ಷಯ ಶೆಟ್ಟಿ ವಂದಿಸಿದರು.

ಇನ್ನರ್ ವ್ಹೀಲ್ ಕ್ಲಬ್ ಆಫ್ ಗದಗ ಮಿಡ್‌ಟೌನ್ ಅಧ್ಯಕ್ಷರಾದ ಶ್ರೀಮತಿ ರಶ್ಮಿ ಕುರಗೋಡ, ಶಿಬಿರದ ಪ್ರಾಯೋಜಕರಾದ ಶ್ರೀಮತಿ ಗೀತಾ ಭಿಕ್ಷಾವತಿಮಠ ಹಾಗೂ ಶ್ರೀಮತಿ ಪಾರ್ವತಿ ಕೂಡ್ಲೆಪ್ಪ ಪರಡ್ಡಿ ಉಪಸ್ಥಿತರಿದ್ದರು.

### ಕಪ್ಪತ್ತಗಿರಿ ಫೌಂಡೇಶನ್‌ನಿಂದ 150 ವಿದ್ಯಾರ್ಥಿಗಳಿಗೆ ಮಾಹಿತಿ ಕಾರ್ಯಕ್ರಮ

## ಮಕ್ಕಳ ಸುರಕ್ಷತೆಗೆ ಪೋಕ್ಸೋ ಅರಿವು ಅತ್ಯಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**



ಹದಿಹರೆಯದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಪೋಕ್ಸೋ ಕಾಯ್ದೆಯ ಕುರಿತು ಸಮರ್ಪಕ ಮಾಹಿತಿ ಹಾಗೂ ಅರಿವು ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ವೀಕಾರ ಕೇಂದ್ರದ ಅಧೀಕ್ಷಕರಾದ ಶ್ರೀಮತಿ ಕಸ್ತೂರಿ ಬಳ್ಳೊಳ್ಳಿ ಹೇಳಿದರು.

ಕಪ್ಪತ್ತಗಿರಿ ಫೌಂಡೇಶನ್ (ರಿ), ಕಳಸಾಪೂರ ಗದಗ ಹಾಗೂ ಕಪ್ಪತ್ತಗಿರಿ ಶಿಕ್ಷಣ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ ಆಗಸ್ಟ್ 31ರಂದು ಬೆಳದಡಿಯ ಶ್ರೀ ವೆಂಕಟೇಶ್ವರ ಪ್ರೌಢಶಾಲೆಯಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪೋಕ್ಸೋ ಕಾಯ್ದೆ ಅರಿವು ಮೂಡಿಸುವ ಮಾಹಿತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಸುರಕ್ಷತೆ ಹಾಗೂ ಅವರ ಹಕ್ಕುಗಳ ರಕ್ಷಣೆಯ ದೃಷ್ಟಿಯಿಂದ ಪೋಕ್ಸೋ ಕಾಯ್ದೆಯ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಕಪ್ಪತ್ತಗಿರಿ ಫೌಂಡೇಶನ್ ಕೈಗೊಂಡಿರುವ ಸಮಾಜಮುಖಿ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಗದಗದ ವಕೀಲರಾದ ಶ್ರೀಮತಿ ಶೈಲಜಾ ಹಿರೇಮಠ ಅವರು ಪೋಕ್ಸೋ ಕಾಯ್ದೆಯ ಕುರಿತು ವಿದ್ಯಾರ್ಥಿಗಳಿಗೆ ಸವಿಸ್ತಾರ ಮಾಹಿತಿ ನೀಡಿದರು. ಮಕ್ಕಳ ಸುರಕ್ಷತೆ, ಮಕ್ಕಳ ಹಕ್ಕುಗಳು ಹಾಗೂ ಕಾಯ್ದೆಯ ಮಹತ್ವದ ಕುರಿತು ಸರಳವಾಗಿ ವಿವರಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಗದಗ ಸ್ವೀಕಾರ ಕೇಂದ್ರದ ಸಹಾಯಕರಾದ ಶ್ರೀಮತಿ ರೇಖಾ ನೀಲ್‌ರೆಡ್ಡಿ ಅವರು ವಿವಿಧ ಉದಾಹರಣೆಗಳ ಮೂಲಕ ಪೋಕ್ಸೋ ಕಾಯ್ದೆಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿದರು. ಮಕ್ಕಳು ತಮ್ಮ ಸುರಕ್ಷತೆಯ ಬಗ್ಗೆ ಸದಾ ಜಾಗೃತರಾಗಿರಬೇಕು. ಯಾವುದೇ ರೀತಿಯ ಸಮಸ್ಯೆ ಎದುರಾದಾಗ ಭಯಪಡದೆ ಸೂಕ್ತ ವ್ಯಕ್ತಿಗಳಿಗೆ ಮಾಹಿತಿ ನೀಡಿ ಅಗತ್ಯ ಸಹಾಯ ಪಡೆಯಬೇಕು ಎಂದು ತಿಳಿಸಿದರು.

ಶ್ರೀ ವೆಂಕಟೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಾರ್ಥನೆ ಸಲ್ಲಿಸಿದರು. ಸಮಾಜ ವಿಜ್ಞಾನ ಉಪನ್ಯಾಸಕರಾದ ಶ್ರೀ ಮಹಾಂತೇಶ ಮಲ್ಲಾರಿ ಅವರು ಸ್ವಾಗತಿಸಿದರು. ಹಿಂದಿ ಉಪನ್ಯಾಸಕರಾದ ಶ್ರೀ ಶಂಕರ ನಾಯಕ್ ಕಾರ್ಯಕ್ರಮ ನಿರೂಪಿಸಿದರು. ಕಪ್ಪತ್ತಗಿರಿ ಫೌಂಡೇಶನ್‌ನ ಶಿರಹಟ್ಟಿ ತಾಲೂಕು ಅಧ್ಯಕ್ಷರಾದ ಶ್ರೀಮತಿ ಶಾಂತ ಅಂಗಡಿ ವಂದನಾರ್ಪಣೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅಖಿಲ ಭಾರತ ಜಂಗಮ ಸೇವಾ ಸಂಸ್ಥೆ, ಗದಗದ ಅಧ್ಯಕ್ಷರಾದ ಶ್ರೀ ಫಕೀರಯ್ಯ ಹಿರೇಮಠ ಉಪಸ್ಥಿತರಿದ್ದರು.

> ಮಕ್ಕಳು ನಮ್ಮ ದೇಶದ ಅಮೂಲ್ಯ ಸಂಪತ್ತು. ಅವರು ಉತ್ತಮ ಸಂಸ್ಕಾರ, ಶಿಕ್ಷಣ ಮತ್ತು ವಿನಯವನ್ನು ಮೈಗೂಡಿಸಿಕೊಂಡು ಬೆಳೆಯಬೇಕು. ಮಕ್ಕಳನ್ನು ಮೊಬೈಲ್ ವ್ಯಸನದಿಂದ ದೂರವಿಟ್ಟು ಉತ್ತಮ ಚಿಂತನೆಯುಳ್ಳ ನಾಗರಿಕರನ್ನಾಗಿ ರೂಪಿಸುವ ನಿಟ್ಟಿನಲ್ಲಿ ಕಪ್ಪತ್ತಗಿರಿ ಫೌಂಡೇಶನ್ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ.
>
> - ಶ್ರೀಮತಿ ಚಂದ್ರಕಲಾ ಇಟಗಿಮಠ, ಸಂಸ್ಥಾಪಕ ಅಧ್ಯಕ್ಷರು, ಕಪ್ಪತ್ತಗಿರಿ ಫೌಂಡೇಶನ್


ಶ್ರೀ ವೆಂಕಟೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಶ್ರೀ ಕಾಂತ ಸಂಜೀವಸ್ವಾಮಿ, ಶ್ರೀ ವಿಠ್ಠಲ ಪೂಜಾರ, ಶ್ರೀ ಮಾರುತಿ ಹಂಡಿ, ಕುಮಾರಿ ಶೋಭಾ ಪೂಜಾರ, ಶ್ರೀಮತಿ ಟಿ.ಪಿ. ರೊಕ್ಕದಕಟ್ಟಿ ಸೇರಿದಂತೆ ಶಾಲೆಯ ಎಲ್ಲ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ 8, 9 ಹಾಗೂ 10ನೇ ತರಗತಿಯ ಸುಮಾರು 150 ವಿದ್ಯಾರ್ಥಿಗಳು ಭಾಗವಹಿಸಿ ಪೋಕ್ಸೋ ಕಾಯ್ದೆಯ ಕುರಿತು ಅಗತ್ಯ ಮಾಹಿತಿ ಹಾಗೂ ಅರಿವು ಪಡೆದುಕೊಂಡರು.

## ಸಂಕ್ಷಿಪ್ತ ಸುದ್ದಿಗಳು

### ನಿಧನ

**ಹನಮವ್ವ ದಾಸರ**



**ಡಂಬಳ:** ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಪೇಠಾಲೂರ ಗ್ರಾಮದ ಚನ್ನದಾಸರ ಸಮುದಾಯದ ಹಿರಿಯರಾದ ಹನಮವ್ವ ವೆಂಕಪ್ಪ ದಾಸರ (80) ಅವರು ಬುಧವಾರ ನಿಧನರಾದರು. ಮೃತರು ಮೂವರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಗುರುವಾರ ಪೇಠಾಲೂರ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿತು.

# ವಿಬಿಜಿ ರಾಮ್‌ಜಿ ಕೂಲಿಕಾರರೊಂದಿಗೆ ಸಿಎಂ ಸಂವಾದ

## ಕಂದಕ ಬದು ಕಾಮಗಾರಿ ಮುಂದುವರಿಸಲು ಅವಕಾಶ ಕಲ್ಪಿಸುವಂತೆ ಮನವಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆ ಕೊರತೆಯಿಂದ ಸಂಕಷ್ಟದಲ್ಲಿರುವ ರೈತರ ಅಳಲು ಆಲಿಸಿ ಬರ ಪರಿಸ್ಥಿತಿಯ ಅವಲೋಕನಕ್ಕಾಗಿ ಮಂಗಳವಾರ ಆಗಮಿಸಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಾಲೂಕಿನ ಕುರ್ತಕೋಟಿ ಗ್ರಾಮದ ವಿಬಿಜಿ ರಾಮ್‌ಜಿ ಕೂಲಿಕಾರರೊಂದಿಗೆ ಸಂವಾದ ನಡೆಸಿದರು. ಈ ಹಿಂದೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸಮುದಾಯ ಕಂದಕ ಬದು ಕಾಮಗಾರಿಗೆ ಅವಕಾಶವಿತ್ತು. ಈಗ ಜಾರಿಯಾಗಿರುವ 'ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ)' ಯೋಜನೆಯಲ್ಲಿಯೂ ಈ ಕಾಮಗಾರಿಯನ್ನು ಮುಂದುವರಿಸಲು ಅವಕಾಶ ಕಲ್ಪಿಸಬೇಕು ಎಂದು ಕೂಲಿಕಾರರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆ ಕುಂಠಿತಗೊಂಡಿರುವ ಹಿನ್ನೆಲೆಯಲ್ಲಿ ಕೂಲಿ ಕೆಲಸದ ಕೊರತೆಯಿಂದ ಕುಟುಂಬ ನಿರ್ವಹಣೆಗೆ ತೊಂದರೆಯಾಗುತ್ತಿದೆ ಎಂದು ಅವರು ವಿವರಿಸಿದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಪ್ಪಣ್ಣ ಇನಾಮತಿ ಮಾತನಾಡಿ, ರೈತರು ತಮ್ಮ ಜಮೀನಿನಲ್ಲಿ ಬದು ನಿರ್ಮಿಸಿಕೊಳ್ಳುವುದರಿಂದ ಅಂತರ್ಜಲ ಪ್ರಮಾಣ ಹೆಚ್ಚುವುದರ ಜತೆಗೆ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗುವುದನ್ನು ತಡೆಯಬಹುದು. ಮಳೆಯ ಹೆಚ್ಚುವರಿ ನೀರನ್ನು ಸಂರಕ್ಷಿಸುವ ಮೂಲಕ ಉತ್ತಮ ಇಳುವರಿ ಪಡೆಯಲು ಸಹಕಾರಿಯಾಗಲಿದೆ ಎಂದು ಕಂದಕ ಬದು ಕಾಮಗಾರಿಯ ಉಪಯುಕ್ತತೆಯನ್ನು ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಟ್ಟರು. ರೈತರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಕುರಿತು ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಬರ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಲಾಗುತ್ತಿದ್ದು, ಇನ್ನಷ್ಟು ಪ್ರದೇಶಗಳಿಗೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಅಧ್ಯಯನ ಮಾಡಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ, ಶಾಸಕರಾದ ಎಚ್.ಕೆ. ಪಾಟೀಲ, ಸಿ.ಸಿ. ಪಾಟೀಲ, ಎನ್.ಎಚ್. ಕೋನರೆಡ್ಡಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್. ಎಸ್. ಜಿನಗಿ, ಸಹಾಯಕ ನಿರ್ದೇಶಕ ಕುಮಾರ ಪೂಜಾರ, ಗ್ರಾಪಂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದೈಹಿಕ ಶ್ರಮ ಹಾಗೂ ಕ್ರಿಯಾಶೀಲತೆಗೆ ಕ್ರೀಡಾಕೂಟ ಸಹಕಾರಿ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕ್ರೀಡಾಕೂಟಗಳಲ್ಲಿ ಭಾಗವಹಿಸುವುದರಿಂದ ದೈಹಿಕ ಶ್ರಮದೊಂದಿಗೆ ಕ್ರಿಯಾಶೀಲತೆ ಹೆಚ್ಚಲು ಸಹಕಾರಿಯಾಗುತ್ತದೆ ಎಂದು ಫಕ್ಕೀರಯ್ಯ ಅಮೋಘಿಮಠ ಹೇಳಿದರು. ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯಲ್ಲಿ ನಡೆದ ಮುಳಗುಂದ ವಲಯ ಮಟ್ಟದ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿ ಅವರು ಮಾತನಾಡಿದರು. ಕ್ರೀಡಾಕೂಟದಲ್ಲಿ ಸೋಲು-ಗೆಲುವು ಮುಖ್ಯವಲ್ಲ, ಭಾಗವಹಿಸುವಿಕೆ ಮುಖ್ಯವಾಗಿದೆ. ಆದ್ದರಿಂದ ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಇದರಿಂದ ಭವಿಷ್ಯದಲ್ಲಿ ಉತ್ತಮ ಅವಕಾಶಗಳು ದೊರೆಯುವುದರ ಜತೆಗೆ ಮಕ್ಕಳಲ್ಲಿ ಆತ್ಮಸ್ಥೈರ್ಯ, ಛಲ, ಆತ್ಮವಿಶ್ವಾಸ ಹಾಗೂ ಗುರಿ ಸಾಧಿಸುವ ಮನೋಭಾವ ಬೆಳೆಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಧಾನಗುರು ಎಸ್.ಎಚ್. ಪೂಜಾರ, ಎಸ್‌ಡಿ-ಎಂಸಿ ಅಧ್ಯಕ್ಷ ಮಹಾದೇವಪ್ಪ ಮಾನೇಗಾರ, ದೈಹಿಕ ಶಿಕ್ಷಣ ಶಿಕ್ಷಕ ವಿ.ಟಿ. ಅಂಗಡಿ, ನೂರಹ್ಮದ ನಧಾಫ್, ಮಂಜುನಾಥ ಕಲ್ಯಾಣಮಠ, ಬಸವರಾಜ ಗೌರಿಮನಿ, ಗೀತಾ ಪಾಟೀಲ, ಗೀತಾ ಕುಂದರಗಿ, ಸುಕನ್ಯಾ ಕೊಲ್ಲಾರಿ, ಕವಿತಾ ಬಿನ್ನಾಳ, ಮಹಾಂತೇಶ ನಪೂರಿಮಠ, ಚಂದ್ರಶೇಖರ ಮರಿದೇವರಮಠ ಸೇರಿದಂತೆ ದೈಹಿಕ ಶಿಕ್ಷಕರು ಹಾಗೂ ಶಿಕ್ಷಕಿಯರು ಉಪಸ್ಥಿತರಿದ್ದರು.

## ಪಿಪಿಪಿ ಮಾದರಿಯ ವಾಣಿಜ್ಯ ಸಂಕೀರ್ಣಕ್ಕೆ 35 ಎಕರೆ ವಕಾರಸಾಲು ಜಾಗ ಬಳಕೆ ಬೇಡ

# ಬೃಹತ್ ಬಿಸಿನೆಸ್ ಸೆಂಟರ್ ಊರಿನ ಹೊರಗಡೆ ನಿರ್ಮಿಸಿ!

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಮಧ್ಯಭಾಗದಲ್ಲಿರುವ 35 ಎಕರೆ ವಿಶಾಲವಾದ ವಕಾರಸಾಲು ಜಾಗದಲ್ಲಿ ಪಿಪಿಪಿ ಮಾದರಿಯ ಬೃಹತ್ ವಾಣಿಜ್ಯ ಸಂಕೀರ್ಣ ಹಾಗೂ ಅಂತರರಾಷ್ಟ್ರೀಯ ಮಟ್ಟದ ಬಿಸಿನೆಸ್ ಸೆಂಟರ್ ನಿರ್ಮಿಸುವ ಬದಲು, ಈ ಯೋಜನೆಯನ್ನು ನಗರದ ಹೊರವಲಯದಲ್ಲಿ ಅನುಷ್ಠಾನಗೊಳಿಸಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಆಗ್ರಹಿಸಿದ್ದಾರೆ.

ಈಗಾಗಲೇ ಸಂಬಂಧಪಟ್ಟ ಪ್ರಾಧಿಕಾರ ರಚನೆಯಾಗಿದ್ದು, ಬೆಂಗಳೂರು ಹಾಗೂ ಗದಗದಲ್ಲಿ ನಡೆದ ಸಭೆಗಳಲ್ಲಿ ಯೋಜನೆ ಕುರಿತು ಚರ್ಚೆ ಹಾಗೂ ತೀರ್ಮಾನ ಕೈಗೊಳ್ಳಲಾಗಿದೆ. ಆದರೆ ಬೃಹತ್ ವಾಣಿಜ್ಯ ಸಂಕೀರ್ಣವನ್ನು ನಗರದ ಮಧ್ಯಭಾಗದಲ್ಲಿ ನಿರ್ಮಿಸುವುದು ಸೂಕ್ತವಲ್ಲ. ನಗರದ ಹೊರವಲಯದಲ್ಲಿ ವಿಶಾಲ ಪ್ರದೇಶವನ್ನು ಗುರುತಿಸಿ ಅಲ್ಲಿ ಪಿಪಿಪಿ ಮಾದರಿಯಲ್ಲಿ ಆಧುನಿಕ ಬಿಸಿನೆಸ್ ಸೆಂಟರ್ ನಿರ್ಮಿಸಬೇಕು ಎಂದು ಅವರು ಜಿಲ್ಲಾಡಳಿತ ಹಾಗೂ ಕರ್ನಾಟಕ ಸರ್ಕಾರವನ್ನು ಒತ್ತಾಯಿಸಿದ್ದಾರೆ.

**35 ಎಕರೆ ಜಾಗದ ಬಗ್ಗೆ ಪುನರ್ ಪರಿಶೀಲನೆಗೆ ಆಗ್ರಹ**

ನಗರದ ಮಧ್ಯಭಾಗದಲ್ಲಿರುವ 35 ಎಕರೆ ವಿಶಾಲ ಜಾಗವನ್ನು ಕರ್ನಾಟಕ ಸರ್ಕಾರ, ಜಿಲ್ಲಾಡಳಿತ ಹಾಗೂ ನಗರಸಭೆ ಪುನರ್ ಪರಿಶೀಲನೆ ಮಾಡಬೇಕು. ಈ ಜಾಗವನ್ನು ನಗರಸಭೆಗೆ ಹಸ್ತಾಂತರಿಸಿ, ಈ ಹಿಂದೆ ಇಲ್ಲಿಯೇ ವ್ಯಾಪಾರ ನಡೆಸುತ್ತಿದ್ದ ಹಳೆಯ ವ್ಯಾಪಾರಸ್ಥರಿಗೆ ಆದ್ಯತೆ ನೀಡಿ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ನಗರದ ಈ ಭಾಗವು ಹಲವು ದಶಕಗಳಿಂದ ಪ್ರಮುಖ ವ್ಯಾಪಾರ-ವಹಿವಾಟಿನ ಕೇಂದ್ರವಾಗಿತ್ತು. ಇಲ್ಲಿ ಸಿಮೆಂಟ್, ಕಬ್ಬಿಣ, ಗೊಬ್ಬರ, ಬೇಳೆಕಾಳು, ಹಾರ್ಡ್‌ವೇರ್, ಸಗಟು ಕಿರಾಣಿ, ಕಾಳುಕಡಿ, ವಾಹನಗಳ ಬಿಡಿಭಾಗಗಳ ಅಂಗಡಿಗಳು, ಗ್ಯಾರೇಜ್‌ಗಳು, ಶಾಮಿಯಾನ ಹಾಗೂ ಕೃಷಿಗೆ ಅಗತ್ಯವಿರುವ ವಿವಿಧ ವಾಣಿಜ್ಯ ಮಳಿಗೆಗಳು ಕಾರ್ಯನಿರ್ವಹಿಸುತ್ತಿದ್ದವು.

ಆದರೆ ದಿಢೀರನೆ ಕಟ್ಟಡಗಳನ್ನು ತೆರವುಗೊಳಿಸಿದ್ದರಿಂದ ಹಲವು ಹಳೆಯ ವ್ಯಾಪಾರಸ್ಥರು ಸಂಕಷ್ಟಕ್ಕೆ ಸಿಲುಕಿದ್ದು, ತಮ್ಮ ವ್ಯಾಪಾರ-ವಹಿವಾಟನ್ನು ಕಳೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ, ಈ ಹಿಂದೆ ಅಲ್ಲಿಯೇ ವ್ಯಾಪಾರ ನಡೆಸುತ್ತಿದ್ದ ವ್ಯಾಪಾರಸ್ಥರ ಪ್ರತ್ಯೇಕ ಸಭೆ ಕರೆದು ಅವರ ಅಭಿಪ್ರಾಯ ಪಡೆದು, ಅವರಿಗೆ ಮರಳಿ ವ್ಯಾಪಾರ ನಡೆಸಲು ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಲಾಗಿದೆ.

**ಹಳೆಯ ವ್ಯಾಪಾರಸ್ಥರನ್ನು ಕಡೆಗಣಿಸಬೇಡಿ**

ನಗರದ ಹಳೆಯ ವ್ಯಾಪಾರಸ್ಥರ ಸಭೆ ನಡೆಸದೆ ಅಥವಾ ಅವರ ಸಮಗ್ರ ಅಭಿಪ್ರಾಯ ಪಡೆಯದೆ ಏಕಪಕ್ಷೀಯ ನಿರ್ಣಯ ಕೈಗೊಳ್ಳಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ವಿಶೇಷವಾಗಿ ಈ ಹಿಂದೆ ಆ ಪ್ರದೇಶದಲ್ಲಿ ವ್ಯಾಪಾರ ಮಳಿಗೆಗಳನ್ನು ಹೊಂದಿರದವರನ್ನು ಸಭೆಯಲ್ಲಿ ಸೇರಿಸಿಕೊಂಡು ಒಮ್ಮತದ ನಿರ್ಣಯ ಕೈಗೊಂಡಿರುವುದು ಸರಿಯಲ್ಲ ಎಂದು ಜಿಲ್ಲಾ ವಿಕಾಸ ವೇದಿಕೆ ಆಕ್ಷೇಪ ವ್ಯಕ್ತಪಡಿಸಿದೆ.

ಮೊದಲು ಅಲ್ಲಿ ವ್ಯಾಪಾರ ನಡೆಸುತ್ತಿದ್ದ ಎಲ್ಲ ವ್ಯಾಪಾರಸ್ಥರ ಸಭೆ ಆಯೋಜಿಸಿ, ಅವರ ಸಮಸ್ಯೆಗಳನ್ನು ಆಲಿಸಿ, ಅವರಿಗೆ ಮರಳಿ ವ್ಯಾಪಾರ-ವಹಿವಾಟು ನಡೆಸಲು ಅವಕಾಶ ನೀಡುವ ಕುರಿತು ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.



**ಹೊರವಲಯದಲ್ಲಿ ಬಿಸಿನೆಸ್ ಸೆಂಟರ್‌ಗೆ ಹೆಚ್ಚಿನ ಅವಕಾಶ**

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ವಿಶೇಷ ಅನುದಾನ ತಂದು, ನಗರದ ಹೊರವಲಯದಲ್ಲಿ ವಿಶಾಲ ಪ್ರದೇಶದಲ್ಲಿ ಬೃಹತ್ ವಾಣಿಜ್ಯ ಸಂಕೀರ್ಣ ಹಾಗೂ ಬಿಸಿನೆಸ್ ಸೆಂಟರ್ ನಿರ್ಮಿಸಿದರೆ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ವೇಗ ಸಿಗಲಿದೆ ಎಂದು ವಿಶ್ವನಾಥ ಖಾನಾಪೂರ ಅಭಿಪ್ರಾಯಪಟ್ಟಿದ್ದಾರೆ.

ನಗರದ ಹೊರವಲಯದಲ್ಲಿ ಯೋಜನೆ ನಿರ್ಮಾಣವಾದರೆ ವಿಶಾಲವಾದ ಪಾರ್ಕಿಂಗ್ ವ್ಯವಸ್ಥೆ, ಸುಗಮ ಸಂಚಾರ, ದೊಡ್ಡ ಪ್ರಮಾಣದ ವಾಣಿಜ್ಯ ಚಟುವಟಿಕೆಗಳಿಗೆ ಅವಕಾಶ ದೊರೆಯಲಿದೆ. ಅಲ್ಲದೆ ಬಾಗಲಕೋಟೆ, ಕೊಪ್ಪಳ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳ ಜನರೂ ಸುಲಭವಾಗಿ ಆಗಮಿಸಿ ವ್ಯಾಪಾರ-ವಹಿವಾಟು ನಡೆಸಲು ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಇದರಿಂದ ಗದಗ ಜಿಲ್ಲೆಯ ವ್ಯಾಪಾರ ವ್ಯವಸ್ಥೆಗೆ ಹೊಸ ಗುರುತು ದೊರೆಯುವುದರ ಜತೆಗೆ ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗೂ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಅವರು ಹೇಳಿದ್ದಾರೆ.

**ನಗರದ ಮಧ್ಯಭಾಗದಲ್ಲಿ ಜನಸಾಮಾನ್ಯರ ವ್ಯಾಪಾರಕ್ಕೆ ಆದ್ಯತೆ**

ಗದಗ ನಗರವು ಸೀಮಿತ ವಿಸ್ತೀರ್ಣ ಹೊಂದಿದ್ದು, ನಗರದ ಮಧ್ಯಭಾಗದಲ್ಲಿ ಕಡಿಮೆ ಅಂತರದಲ್ಲಿಯೇ ಪ್ರಮುಖ ವಾಣಿಜ್ಯ ಪ್ರದೇಶಗಳು ನೆಲೆಗೊಂಡಿವೆ. ಹೀಗಾಗಿ ಗ್ರಾಮೀಣ ಹಾಗೂ ನಗರ ಪ್ರದೇಶದ ಜನರಿಗೆ ದೈನಂದಿನ ಅಗತ್ಯ ವಸ್ತುಗಳು ಸುಲಭವಾಗಿ ದೊರೆಯುವಂತಹ ಮಾರುಕಟ್ಟೆ ಹಾಗೂ ವ್ಯಾಪಾರ ಮಳಿಗೆಗಳನ್ನು ನಗರದೊಳಗೆ ಉಳಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ವೇದಿಕೆ ಅಭಿಪ್ರಾಯಪಟ್ಟಿದೆ.

> ಬೃಹತ್ ಪಿಪಿಪಿ ಮಾದರಿಯ ವಾಣಿಜ್ಯ ಸಂಕೀರ್ಣ ಹಾಗೂ ಬಿಸಿನೆಸ್ ಸೆಂಟರ್ ನಗರದ ಹೊರವಲಯದಲ್ಲಿ ನಿರ್ಮಿಸಿದರೆ ಸುಗಮ ಸಂಚಾರ, ವಿಶಾಲ ಪಾರ್ಕಿಂಗ್ ಮತ್ತು ದೊಡ್ಡ ಪ್ರಮಾಣದ ವ್ಯಾಪಾರಕ್ಕೆ ಅನುಕೂಲವಾಗಲಿದೆ. ನಗರದ ಮಧ್ಯಭಾಗದಲ್ಲಿರುವ ಜಾಗದಲ್ಲಿ ಈ ಹಿಂದೆ ವ್ಯಾಪಾರ ನಡೆಸುತ್ತಿದ್ದ ಹಳೆಯ ವ್ಯಾಪಾರಸ್ಥರಿಗೆ ಆದ್ಯತೆ ನೀಡಿ, ಅವರ ಬದುಕು ಮತ್ತು ವ್ಯಾಪಾರ-ವಹಿವಾಟಿಗೆ ಸೂಕ್ತ ರಕ್ಷಣೆ ನೀಡಬೇಕು.
> – ವಿಶ್ವನಾಥ ಖಾನಾಪೂರ, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ನಗರದ ಜನಸಾಮಾನ್ಯರಿಗೆ ಅನುಕೂಲವಾಗುವ ಸಣ್ಣ ಮತ್ತು ಮಧ್ಯಮ ವ್ಯಾಪಾರ ಮಳಿಗೆಗಳಿಗೆ ನಗರದ ಮಧ್ಯಭಾಗದಲ್ಲಿಯೇ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು. ಬೃಹತ್ ಪ್ರಮಾಣದ ಪಿಪಿಪಿ ಯೋಜನೆ ಹಾಗೂ ಅಂತರರಾಷ್ಟ್ರೀಯ ಮಟ್ಟದ ಬಿಸಿನೆಸ್ ಸೆಂಟರ್‌ಗಳನ್ನು ನಗರದ ಹೊರವಲಯದಲ್ಲಿ ನಿರ್ಮಿಸುವ ಮೂಲಕ ನಗರ ಸಂಚಾರದ ಮೇಲಿನ ಒತ್ತಡವನ್ನು ಕಡಿಮೆ ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ಈ ಕುರಿತು ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ನೇತೃತ್ವದಲ್ಲಿ ಪ್ರಭು ಜಂಗಮನಿ, ಬಸವರಾಜ ದೇಗುಲ, ಮಲ್ಲಿಕಾರ್ಜುನ ಕುರ್ತಕೋಟಿ, ಪರಶುರಾಮ ನರಗುಂದ, ರಾಜು ನರಗುಂದ, ಆನಂದ ಕಬಾಡಿ, ರಾಜು ಮೇರವಾಡೆ ಸೇರಿದಂತೆ ಹಲವರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದಾರೆ.

# ಸಮಾಜಮುಖಿ ಕಾರ್ಯಗಳಿಗೆ ಸಂಘ ಸಂಸ್ಥೆಗಳು ಮುಂದಾಗಲಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಂಘ ಸಂಸ್ಥೆಗಳ ಕಾರ್ಯಕರ್ತರು ಸಮಾಜಮುಖಿ ಕೆಲಸಗಳನ್ನು ಮಾಡಲು ಮುಂದಾಗಬೇಕು. ಒಗ್ಗಟ್ಟಿನಿಂದ ಯಾವುದೇ ಕೆಲಸವನ್ನಾದರೂ ಸಾಧಿಸಲು ಸಾಧ್ಯ ಎಂದು ಮಹಿಳಾ ಸಾಹಿತಿ ಲಲಿತಕ್ಕ ಕೆರಿಮನಿ ಹೇಳಿದರು.

ಇಲ್ಲಿನ ಬಾಳಿಕಾಯಿ ಅವರ ಮಿಲ್ ಆವರಣದಲ್ಲಿ ಬುಧವಾರ ಸಮಾಜಸೇವಕ ಶಿವಲಿಂಗಯ್ಯ ಹೊತ್ತಗಿಮಠ ಸ್ನೇಹಿತರ ಬಳಗದ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಕಾರ್ಯಕ್ರಮ ಉದ್ಘಾಟಿಸಿ, ಯುವಜನತೆ ಉತ್ತಮ ಕೆಲಸಗಳ ಮೂಲಕ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ಎಲ್ಲವನ್ನೂ ಸರ್ಕಾರದಿಂದಲೇ ಮಾಡಲು ಸಾಧ್ಯವಿಲ್ಲ. ಸಣ್ಣಪುಟ್ಟ ಸಮಾಜಮುಖಿ ಕಾರ್ಯಗಳನ್ನು ಸಂಘ ಸಂಸ್ಥೆಗಳು, ಸಮಾಜ ಚಿಂತಕರು ಹಾಗೂ ಕಾರ್ಯಕರ್ತರು ಕೈಗೆತ್ತಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಯಕ ಜೀವಿಗಳಾದ ಪಾದರಕ್ಷೆ ರಿಪೇರಿ ಮಾಡುವ ರವಿ ಹಂಜಗಿ, ಸರ್ಕಾರಿ ಆಸ್ಪತ್ರೆಯ ಸ್ವಚ್ಛತಾ ಸೇವಕಿ ಯಲ್ಲಮ್ಮ ಮಡಿವಾಳರ, ರೈತರಿಗೆ ಬುಟ್ಟಿ ತಯಾರಿಸಿಕೊಡುವ ಕೊರವರ ಸಮಾಜದ ಸೋಮಣ್ಣ ಭಜಂತ್ರಿ, ಪೌರ ಕಾರ್ಮಿಕ ರೇಣಪ್ಪ ಕಮತದ, ಹಡಪದ ಅಪ್ಪಣ್ಣ ಸಮಾಜದ ತಿಪ್ಪಣ್ಣ ಹಡಪದ ಅವರನ್ನು ಸನ್ಮಾನಿಸಲಾಯಿತು. ಅಲ್ಲದೆ, ಎಂ.ಎ. ಕನ್ನಡ ವಿಷಯದಲ್ಲಿ 9 ಚಿನ್ನದ ಪದಕಗಳನ್ನು ಪಡೆದ ಸಂಗೀತಾ ಲಕ್ಕಪ್ಪನವರ ಅವರನ್ನೂ ಗೌರವಿಸಲಾಯಿತು.

ಸಂಘಟಕ ಶಿವಲಿಂಗಯ್ಯ ಹೊತ್ತಗಿಮಠ ಮಾತನಾಡಿ, ಎಲೆಮರೆಯ ಕಾಯಿಯಂತೆ ಹಲವು ವರ್ಷಗಳಿಂದ ಕಾಯಕದಲ್ಲಿಯೇ ಸಂತೃಪ್ತಿ ಕಂಡು, ತಮ್ಮ ಕೆಲಸದಲ್ಲಿಯೇ ದೇವರನ್ನು ಕಾಣುತ್ತಿರುವ ಕಾಯಕ ಜೀವಿಗಳ ಸೇವೆ ಹಾಗೂ ಬದುಕಿನ ಕುರಿತು ತಿಳಿಸಿದರು.

ಚಂಬಣ್ಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಪದ್ಮರಾಜ ಪಾಟೀಲ, ಶಶಿಧರ ಮಳಲಿ, ಮಹೇಶ ಲಮಾಣಿ (ಅಕ್ಕಿಗುಂದ), ಚನ್ನಪ್ಪ ಕೋಲಕಾರ ಹಾಗೂ ಮಂಜುನಾಥ ಮಾಗಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ನೀಲಪ್ಪ ಕರ್ಜೆಕಣ್ಣವರ, ಪ್ರೇಮವ್ವ ಹೊತ್ತಗಿಮಠ, ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ಸೊರಟೂರ, ನಾಗರಾಜ ಹಣಗಿ, ಮಲ್ಲಿಕಾರ್ಜುನ ಕಳಸಾಪುರ, ರಮೇಶ ನಾಡಗೇರ, ದಿಗಂಬರ ಪೂಜಾರ, ಮಾಳಿಂಗರಾಯ ಪೂಜಾರ, ಹೊನ್ನಪ್ಪ ವಡ್ಡರ, ಅಮರೇಶ ತೆಂಬದಮನಿ, ರಾಮು ಅಡಗಿಮನಿ, ಮಲ್ಲಿಕಾರ್ಜುನ ದೊಡ್ಡೂರ, ಜಗದೇವಯ್ಯ ಹಾವೇರಿಮಠ, ಶಿವಾನಂದ ಲಿಂಗಶೆಟ್ಟಿ, ಪ್ರವೀಣ ಬೋಮಲೆ, ಸ್ವಾತಿ ಪೈ, ವೀಣಾ ಜಾಮನೂರ ಹಾಗೂ ಎಲ್.ಆರ್. ಮಲ್ಲಸಮುದ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರತ್ನಾ ಕರ್ಕಿ ಹಾಗೂ ನಿರ್ಮಲಾ ಅರಳಿ ಕಾರ್ಯಕ್ರಮ ನಿರೂಪಿಸಿದರು.

# ಪುಟಾಣಿ ಮಕ್ಕಳೊಂದಿಗೆ ಬೆರೆತು ನಲಿದ ಮುಪ್ಪಿನ ಬಸವಲಿಂಗ ಶ್ರೀಗಳು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪುಟಾಣಿ ಮಕ್ಕಳ ನಡುವೆ ಕುಳಿತು ಅವರ ಮಾತುಗಳನ್ನು ಆಲಿಸಿ, ಮುಗ್ಧ ನಗುವಿಗೆ ಮನಸಾರೆ ನಕ್ಕು, ತಲೆಯ ಮೇಲೆ ಕೈಯಿಟ್ಟು ಆಶೀರ್ವದಿಸಿದ ಹಾಲಕೆರೆಯ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಆತ್ಮೀಯ ಕ್ಷಣಗಳು ಸಮೀಪದ ನಿಡಗುಂದಿಕೊಪ್ಪದ ಶ್ರೀಮಠದ ಆವರಣದಲ್ಲಿ ವಿಶೇಷ ಗಮನ ಸೆಳೆದವು.

ನಿಡಗುಂದಿಕೊಪ್ಪದ ಶ್ರೀಮಠಕ್ಕೆ ಆಗಮಿಸಿದ್ದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಪೀಠಾಧಿಪತಿ ಅಭಿನವ ಚನ್ನಬಸವ ಮಹಾಸ್ವಾಮಿಗಳ ಸಮ್ಮುಖದಲ್ಲಿ ನಡೆಯುತ್ತಿರುವ ಶ್ರೀ ಚನ್ನಚೇತನ ಗುರುಕುಲ ಶಾಲೆಗೆ ಭೇಟಿ ನೀಡಿ ಮಕ್ಕಳೊಂದಿಗೆ ಕೆಲಕಾಲ ಆತ್ಮೀಯವಾಗಿ ಬೆರೆತರು.



ಶಾಲೆಗೆ ಶ್ರೀಗಳು ಆಗಮಿಸುತ್ತಿದ್ದಂತೆ ಪುಟಾಣಿ ಮಕ್ಕಳು ಕುತೂಹಲದಿಂದ ಅವರ ಸುತ್ತ ಸೇರಿದರು. ಮಕ್ಕಳೊಂದಿಗೆ ಸಂವಾದ ನಡೆಸಿದ ಶ್ರೀಗಳು, ಅವರ ಮುಗ್ಧ ಮಾತುಗಳನ್ನು ಆಲಿಸಿ, ಪ್ರತಿಭೆ ಹಾಗೂ ಚುರುಕುತನ ಕಂಡು ಸಂತಸಪಟ್ಟರು.

"ವಿದ್ಯೆ ಕಲಿಯುವುದಷ್ಟೇ ಶಿಕ್ಷಣವಲ್ಲ, ಸಂಸ್ಕಾರ, ಶಿಸ್ತು ಹಾಗೂ ಉತ್ತಮ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗಲೇ ಶಿಕ್ಷಣಕ್ಕೆ ನಿಜವಾದ ಅರ್ಥ ಬರುತ್ತದೆ" ಎಂದು ಮಕ್ಕಳಿಗೆ ಕಿವಿಮಾತು ಹೇಳಿದ ಶ್ರೀಗಳು, ಉತ್ತಮವಾಗಿ ಓದಿ ಸಮಾಜಕ್ಕೆ ಉಪಯುಕ್ತ ವ್ಯಕ್ತಿಗಳಾಗಿ ಬೆಳೆಯುವಂತೆ ಆಶೀರ್ವದಿಸಿದರು.

ಮಕ್ಕಳೊಂದಿಗೆ ಶ್ರೀಗಳು ಬೆರೆತ ಕ್ಷಣಗಳು ಶಾಲಾ ಆವರಣದಲ್ಲಿ ವಿಶೇಷ ಸಂತಸ ಮೂಡಿಸಿದವು. ತಮ್ಮ ನಡುವೆ ಕುಳಿತು ಪ್ರೀತಿಯಿಂದ ಮಾತನಾಡಿದ ಶ್ರೀಗಳ ಸರಳತೆ ಕಂಡು ಪುಟಾಣಿ ಮಕ್ಕಳು ಹರ್ಷಗೊಂಡರು.

ಶ್ರೀಗಳ ಸಾನ್ನಿಧ್ಯದಿಂದ ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹವೂ ಮೂಡಿತು. ನಿಡಗುಂದಿಕೊಪ್ಪದ ಶ್ರೀಮಠದ ಪೀಠಾಧಿಪತಿ ಅಭಿನವ ಚನ್ನಬಸವ ಮಹಾಸ್ವಾಮಿಗಳು, ಶ್ರೀ ಚನ್ನಚೇತನ ಗುರುಕುಲ ಶಾಲೆಯ ಶೈಕ್ಷಣಿಕ ಚಟುವಟಿಕೆಗಳು ಹಾಗೂ ವಿವಿಧ ಆಯಾಮಗಳನ್ನು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳಿಗೆ ಪರಿಚಯಿಸಿದರು.

ಶಾಲೆಯ ನೂತನ ಕಟ್ಟಡ ಉದ್ಘಾಟನೆಗೆ ಆಗಮಿಸಿದ್ದ ಸಂದರ್ಭವನ್ನು ಸ್ಮರಿಸಿದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಶಾಲೆಯು ಉತ್ತರೋತ್ತರ ಅಭಿವೃದ್ಧಿ ಕಾಣಲಿ. ಇಲ್ಲಿ ಕಲಿಯುವ ಮಕ್ಕಳ ಭವಿಷ್ಯ ಉಜ್ವಲವಾಗಲಿ. ಶ್ರೀ ಚನ್ನಬಸವೇಶ್ವರ ಹಾಗೂ ಶ್ರೀ ಅನ್ನದಾನೇಶ್ವರರ ಆಶೀರ್ವಾದ ಸದಾಕಾಲ ಶಾಲೆಯ ಮೇಲಿರಲಿ ಎಂದು ಹಾರೈಸಿದರು. ಮಕ್ಕಳ ನಡುವೆ ಕೆಲಕಾಲ ಕಳೆದ ಶ್ರೀಗಳ ಆತ್ಮೀಯ ಭೇಟಿ ಗುರು-ಶಿಷ್ಯರ ಸಂಬಂಧಕ್ಕೆ ಮಮತೆಯ ಸ್ಪರ್ಶ ನೀಡಿದಂತಿತ್ತು. ಶ್ರೀಗಳ ಆಶೀರ್ವಾದ ಹಾಗೂ ಪುಟಾಣಿ ಮಕ್ಕಳ ಮುಗ್ಧ ನಗು ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಮನದಲ್ಲಿ ಬಹುಕಾಲ ಉಳಿಯುವ ಸ್ಮರಣೀಯ ಕ್ಷಣಗಳಾದವು. ಈ ಸಂದರ್ಭದಲ್ಲಿ ಗ್ರಾಮದ ಗಣ್ಯರು, ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಇಂದು ಕಾಶೀವಿಶ್ವನಾಥನ ಜಾತ್ರಾ ಮಹೋತ್ಸವಕ್ಕೆ ಚಾಲನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗದ ಕಾಶೀ ವಿಶ್ವನಾಥ ನಗರದ ಶ್ರೀ ಕಾಶೀವಿಶ್ವನಾಥನ ಜಾತ್ರಾ ಮಹೋತ್ಸವ, ದುರ್ಗಾದೇವಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ 34ನೇ ವರ್ಷದ ಸಾಮೂಹಿಕ ವಿವಾಹ ಸೇರಿದಂತೆ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಸೆ. 4ರಿಂದ 6ರವರೆಗೆ ಜರುಗಲಿವೆ.

ಸೆ. 4ರಂದು ಮಧ್ಯಾಹ್ನ ಸಾಮೂಹಿಕ ವಿವಾಹ, ಧರ್ಮಸಭೆ ಹಾಗೂ ಮಹಾಅನ್ನಸಂತರ್ಪಣೆ ನಡೆಯಲಿದ್ದು, ಸಂಜೆ ಶ್ರೀ ಕಾಶೀವಿಶ್ವನಾಥನ ಮಹಾರಥೋತ್ಸವ ಜರುಗಲಿದೆ. ಸೆ. 5ರಂದು ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಸನ್ಮಾನ, ಸಾಂಸ್ಕೃತಿಕ ಹಾಗೂ ಪಾರಿತೋಷಕ ವಿತರಣಾ ಕಾರ್ಯಕ್ರಮ ನಡೆಯಲಿದೆ. ಸೆ. 6ರಂದು ಸನ್ಮಾನ ಹಾಗೂ ರಸಮಂಜರಿ ಕಾರ್ಯಕ್ರಮದೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.



ಮೂರು ದಿನಗಳ ಕಾರ್ಯಕ್ರಮಗಳಲ್ಲಿ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಭಾಗವಹಿಸುವರು ಎಂದು ಜಾತ್ರಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

# ವಚನಗಳ ಮೌಲ್ಯ ಕೌಟುಂಬಿಕ ಸಂಸ್ಕಾರಕ್ಕೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಗದಗ**

ವಚನಗಳು ಮನುಷ್ಯನ ಬದುಕಿಗೆ ಮೌಲ್ಯ, ಸಂಸ್ಕಾರ ಹಾಗೂ ಸಾಮಾಜಿಕ ಹೊಣೆಗಾರಿಕೆಯ ದಾರಿಯನ್ನು ತೋರಿಸುವ ದಾರಿದೀಪಗಳಾಗಿವೆ ಎಂದು ಶ್ರೀಮತಿ ಗಿರಿಜಾ ಹಿರೇಮಠ ಹೇಳಿದರು.

ಗದಗ-ಬೆಟಗೇರಿಯ ಬಸವಕೇಂದ್ರದ ವತಿಯಿಂದ ಒಕ್ಕಲಗೇರಿ ಓಣಿಯ ಗಣ್ಯ ಉದ್ಯಮಿಗಳು ಹಾಗೂ ಬಸವಾಭಿಮಾನಿಗಳಾದ ಶಿವಕುಮಾರಗೌಡ ಪಾಟೀಲ ಅವರ ಮನೆಯಲ್ಲಿ ಮಂಗಳವಾರ ಆಯೋಜಿಸಿದ್ದ ವಚನ ಶ್ರಾವಣ ಕಾರ್ಯಕ್ರಮದಲ್ಲಿ ವಚನ ಚಿಂತನೆ ನಡೆಸಿ ಅವರು ಮಾತನಾಡಿದರು.

ವಚನಗಳಲ್ಲಿ ಅಡಕವಾಗಿರುವ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಅರಿತುಕೊಂಡು ಅವುಗಳನ್ನು ತಮ್ಮ ದೈನಂದಿನ ಬದುಕಿನಲ್ಲಿ ಅಳವಡಿಸಿ ಕೊಳ್ಳಬೇಕು. ವಿಶೇಷವಾಗಿ ಕೌಟುಂಬಿಕ ಸಂಸ್ಕಾರ, ಪರಸ್ಪರ ಗೌರವ, ಮಾನವೀಯತೆ ಹಾಗೂ ಸಮಾನತೆಯಂತಹ ಮೌಲ್ಯಗಳನ್ನು ವಚನಗಳು ಸಾರುತ್ತವೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಅನುಭವಿ ಚಿಂತಕ ಎಸ್.ಎ. ಮುಗದ ಹಾಗೂ ಬಸವಕೇಂದ್ರದ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಭಾಗವಹಿಸಿ, ವಚನಗಳ ಮಹತ್ವ ಹಾಗೂ ವಚನಗಳಲ್ಲಿ ಅಡಕವಾಗಿರುವ ಕೌಟುಂಬಿಕ ಸಂಸ್ಕಾರದ ಮೌಲ್ಯಗಳ ಕುರಿತು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಮಹಾತ್ಮ ಬಸವಣ್ಣನವರ ಭಾವಚಿತ್ರಕ್ಕೆ ಕುಟುಂಬದ ಸದಸ್ಯರು ಪುಷ್ಪನಮನ ಸಲ್ಲಿಸಿದರು. ಶಿವಕುಮಾರಗೌಡ ಪಾಟೀಲ ಸ್ವಾಗತಿಸಿದರು. ಶ್ರೀಮತಿ ಮಂಜುಳಾ ಹಾಸಲಕರ ಕಾರ್ಯ ಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ, ಗದಗ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭಾದ ಪದಾಧಿಕಾರಿಗಳು ಹಾಗೂ ಒಕ್ಕಲಗೇರಿ ಓಣಿಯ ಹಿರಿಯರು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka